ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

EMAIL : dairyadadaari@gmail.com ಸಂಪುಟ: 01 ಸಂಚಿಕೆ: 168

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795 ಗುರುವಾರ: 11-06-2026


## ರಾಜ್ಯಸಭೆಗೆ ಸ್ಪರ್ಧಿಸುವ ಅಪೇಕ್ಷೆ ಇರಲಿಲ್ಲ, ಬಿಜೆಪಿ-ಜೆಡಿಎಸ್ ಮೈತ್ರಿ ಮತ್ತಷ್ಟು ಗಟ್ಟಿಯಾಗಿರಲಿದೆ : ದೇವೇಗೌಡರು

**ಬೆಂಗಳೂರು, ಜೂ.10-** ರಾಜ್ಯಸಭಾ ಸದಸ್ಯರಾಗಿ ಮುಂದುವರೆಯಲು ಅಪೇಕ್ಷೆ ಪಟ್ಟಿರಲಿಲ್ಲ ಎಂದು ಸ್ಪಷ್ಟಪಡಿಸಿದ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಅವರು ಎನ್‌ಡಿಎ ಮೈತ್ರಿಕೂಟದೊಂದಿಗಿನ ಜೆಡಿಎಸ್ ಸಂಬಂಧ ಮುಂದುವರೆಯಲಿದೆ ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಹಾಗೂ ನನ್ನ ಸಂಬಂಧ ರಾಜ್ಯಸಭಾ ಸದಸ್ಯ ಸ್ಥಾನಕ್ಕಿಂತ ಮಿಗಿಲಾಗಿದೆ. ಕಳೆದ 10 ವರ್ಷಗಳಿಂದಲೂ ಅವರ ಮತ್ತು ನನ್ನ ವೈಯಕ್ತಿಕ ಸಂಬಂಧ ಸುಮಧುರವಾಗಿದ್ದು, ಮುಂದೆಯೂ ಮುಂದು ವರೆಯಲಿದೆ ಎಂದು ಸ್ಪಷ್ಟಪಡಿಸಿದರು.

ಮೇ 26 ರಂದು ದೆಹಲಿಯಲ್ಲಿ ಕೇಂದ್ರ ಕೃಷಿ ಸಚಿವರ ಪುಸ್ತಕ ಬಿಡುಗಡೆ ಮಾಡಿದ್ದೆ. ಆನಂತರ ಬಿಜೆಪಿಯ ಯಾವೊಬ್ಬ ನಾಯಕರನ್ನೂ ಭೇಟಿ ಮಾಡದೆ ಬೆಂಗಳೂರಿಗೆ ವಾಪಸ್ಸು ಮರಳಿದ್ದೆ. ಒಂದು ವೇಳೆ ರಾಜ್ಯಸಭಾ ಸ್ಥಾನದ ವ್ಯಾಮೋಹ ಇದ್ದಿದ್ದರೆ ಬಿಜೆಪಿ ನಾಯಕರನ್ನು ಭೇಟಿ ಮಾಡುತ್ತಿರಲಿಲ್ಲವೇ ? ಎಂದು ಅವರು ಪ್ರಶ್ನಿಸಿದರು.

ರಾಜ್ಯ ವಿಧಾನಸಭೆಯಲ್ಲಿ ಜೆಡಿಎಸ್‌ನ 18 ಶಾಸಕರಿದ್ದು, ರಾಜ್ಯಸಭಾ ಚುನಾವಣೆಯಲ್ಲಿ ಸ್ಪರ್ಧಿಸುವುದಿಲ್ಲ ಎಂದು ಕೇಂದ್ರ ಸಚಿವ ಕುಮಾರಸ್ವಾಮಿ ನೀಡಿದ್ದ ಹೇಳಿಕೆಯನ್ನು ಸ್ವಾಗತಿಸಿದ್ದೇನೆ ಎಂದರು. ನನ್ನ ಮತ್ತು ಮೋದಿಯವರ ಸಂಬಂಧ ರಾಜ್ಯಸಭಾ ಸದಸ್ಯ



ಸ್ಥಾನಕ್ಕೆ ಸೀಮಿತವಿಲ್ಲ. ಅದಕ್ಕಿಂತ ಮಿಗಿಲಾಗಿದೆ. ರಾಜ್ಯದ ಜನರು ಈ ಬಗ್ಗೆ ತಪ್ಪು ತಿಳಿಯಬಾರದು ಎಂದು ಅವರು ಹೇಳಿದರು. ಸ್ವಂತ ಶಕ್ತಿಯ ಮೇಲೆ ಕೇಂದ್ರದಲ್ಲಿ ಸರ್ಕಾರ ರಚನೆ ಮಾಡಬಹುದಾಗಿದ್ದರೂ ಎನ್‌ಡಿಎ ಮೈತ್ರಿಕೂಟದ ಜೊತೆ ನಮನ್ನು ಸೇರಿಸಿಕೊಂಡಿದ್ದಾರೆ.

ಗೋದ್ರಾ ಹತ್ಯೆ ಪ್ರಕರಣದಲ್ಲಿ ಮೋದಿಯವರನ್ನು ಸಾಕಷ್ಟು ಟೀಕೆ ಮಾಡಿದ್ದೆ. ಕಳೆದ 10 ವರ್ಷದಿಂದ ಅವರ ಮತ್ತು ನನ್ನ ಸಂಬಂಧ ಮುಂದುವರೆಯುತ್ತಾ ಬಂದಿದೆ. ಮೋದಿಯವರ ಆಡಳಿತದ ಬಗ್ಗೆ ನನ್ನ ಭಾವನೆಯನ್ನು ನಿರ್ಭಯವಾಗಿ ಹೇಳಿದ್ದೇನೆ. ಮೋದಿಯವರ ನಾಯಕತ್ವವನ್ನು ಸಮರ್ಥಿಸಿಕೊಂಡು ಮಾತನಾಡಿದ್ದೇನೆ ಎಂದರು.

140 ಕೋಟಿ ಜನಸಂಖ್ಯೆಯಿರುವ ದೇಶದಲ್ಲಿ ಸಾಕಷ್ಟು ಸಮಸ್ಯೆಗಳಿವೆ. 2047ರ ವೇಳೆಗೆ 5 ಟ್ರಿಲಿಯನ್ ಆರ್ಥಿಕ ಶಕ್ತಿಗೆ ತೆಗೆದುಕೊಂಡು ಹೋಗಬೇಕು ಎಂಬ ಉದ್ದೇಶ ಹೊಂದಿದ್ದಾರೆ. ಕೇವಲ ನಮ ದೇಶದಲ್ಲಿ ಅಷ್ಟೆ ಅಲ್ಲ, ವಿದೇಶದಲ್ಲೂ ಮೋದಿಯವರನ್ನು ನಾಯಕರೆಂದು ಒಪ್ಪಿದ್ದಾರೆ. ಆ ಮಟ್ಟಕ್ಕೆ ಬೆಳೆದಿರುವ ಮತ್ತೊಬ್ಬ ಪ್ರತಿಸ್ಪರ್ಧಿ ನಾಯಕರಿಲ್ಲ ಎಂದು ಸ್ಪಷ್ಟಪಡಿಸಿದರು.

ರಾಜ್ಯಸಭಾ ಸದಸ್ಯರಾಗಿಲ್ಲದಿದ್ದರೂ ಮೋದಿ ಮತ್ತು ನನ್ನ ಸಂಬಂಧ ಮುಂದುವರೆಯಲಿದ್ದು, ರಾಜ್ಯಕ್ಕೆ ಸಂಬಂಧಿಸಿದ ಯಾವುದೇ ವಿಚಾರಕ್ಕೆ ಪತ್ರ ಬರೆಯುವುದು, ಭೇಟಿ ಮಾಡುವುದು ಮುಂದುವರೆಯಲಿದೆ. ಕೇಂದ್ರ ಸಂಪುಟದಲ್ಲಿ ಕುಮಾರಸ್ವಾಮಿ ಸಚಿವರಾಗಿ ಮುಂದುವರೆಯುತ್ತಾರೆ ಎಂದು ಅವರು ಹೇಳಿದರು.

ಕಳೆದ 2-3 ದಿನಗಳಿಂದಲೂ ದೇವೇಗೌಡರಿಗೆ ರಾಜ್ಯಸಭಾ ಸದಸ್ಯ ಸ್ಥಾನಕ್ಕೆ ಅವಕಾಶ ಸಿಗಲಿಲ್ಲ ಎಂದು ಮಾಧ್ಯಮಗಳಲ್ಲಿ ವರದಿಗಳು ಬಿತ್ತರವಾದ ಹಿನ್ನೆಲೆಯಲ್ಲಿ ಈ ಸ್ಪಷ್ಟನೆ ನೀಡಿದ್ದೇನೆ ಎಂದರು.

ಕಳೆದ 7 ದಶಕಗಳಿಂದಲೂ ನಾನು ರಾಜಕೀಯದಲ್ಲಿ ಇದ್ದೇನೆ. 1953-54 ರಲ್ಲಿ ಗುತ್ತಿಗೆದಾರ ವೃತ್ತಿಯಿಂದ ಜನಪರ ಸೇವೆ ಆರಂಭಿಸಿದೆ. ಈಗ 93 ವರ್ಷ ವಯಸ್ಸಾಗಿದೆ. ಆದರೂ ಜನಸೇವೆ ಮಾಡುವ ಹಂಬಲ ಮಾತ್ರ ಕಡಿಮೆಯಾಗಿಲ್ಲ ಎಂದು ಸ್ಪಷ್ಟಪಡಿಸಿದರು.ಮೋದಿಗೆ ಶ್ಲಾಘನೆ :ಜವಾಹರಲಾಲ್ ನೆಹರೂ ಅವರಿಗಿಂತ ಹೆಚ್ಚು ಅವಧಿ ಮೋದಿಯವರು 2ನೇಪುಟಕ್ಕೆ

## ಮಾಜಿ ಸಚಿವರಾದ ಎನ್.ಎಸ್ ಬೋಸರಾಜು ಅವರಿಗೆ ಸನ್ಮಾನ.



ಧೈರ್ಯದ ದಾರಿ

**ಸಿರವಾರ.ಜೂ.10- ಕಾಂಗ್ರೆಸ್ ಸರ್ಕಾರದ ಮಾಜಿ ಸಚಿವರಾದ ಎನ್ ಎಸ್ ಬೋಸರಾಜ ಅವರ ಹುಟ್ಟುಹಬ್ಬದ ಅಂಗವಾಗಿ ಶಾಲು ಮತ್ತು ಹೂವಿನ ಹಾರ ಹಾಕಿ ಸಿಹಿ ತಿನ್ನಿಸುವ ಮೂಲಕ ಪಟ್ಟಣ ಪಂಚಾಯತ ಅದ್ಯಕ್ಷರಾದ ಹಾಜಿ ಚೌದ್ರಿ, ಸದಸ್ಯರಾದ ಹಸೇನ್‌ಲಿ ಸಾಬ, ಸೂರಿ ದುರಗಣ್ಣ ನಾಯಕ, ಮೌಲಸಾಬ ವರ್ಚಸ್, ಎಚ್ ಮಾರ್ಕಪ್ಪ ರಂಗನಾಥ ಶುಭಕೋರಿದರು.**


ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ

6360866626


## ಪುರಸಭೆ ವ್ಯಾಪ್ತಿಯಲ್ಲಿನ ಪ್ರತಿ ಬೂತ್‌ನಲ್ಲಿ ಮತದಾರರ ಮ್ಯಾಪಿಂಗ್ ಕಾರ್ಯ ಪೂರ್ಣಗೊಳಿಸಿ:ಎನ್.ಎಸ್.ಬೋಸರಾಜು



ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ಪ್ರವಾಸಿ ಮಂದಿರದಲ್ಲಿ ನಡೆದ ಮಾನ್ವಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಎಸ್. ಐ .ಆರ್ . ಮತಪಟ್ಟಿ ಪರಿಷ್ಕರಣೆ ಕುರಿತು ಬಿ. ಎಲ್.ಎ ಹಾಗೂ ಬಿ.ಎಲ್.ಎ. 1 ಮತ್ತು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು , ಪುರಸಭೆಯ ಮಾಜಿ ಸದಸ್ಯರ ಸಭೆಯಲ್ಲಿ ಮಾಜಿ ಸಚಿವ ವಿಧಾನ ಪರಿಷತ್ ಸದಸ್ಯರಾದ ಎನ್.ಎಸ್ .ಬೋಸುರಾಜು ಮಾತನಾಡಿ ಭಾರತ ಚುನಾವಣಾ ಆಯೋಗವು ಹಮ್ಮಿಕೊಂಡಿರುವ ಮತಪಟ್ಟಿ ಪರಿಷ್ಕರಣ ಕಾರ್ಯಕ್ರಮ ಅಂಗವಾಗಿ ಮಾನ್ವಿ ಪುರಸಭೆ ವ್ಯಾಪ್ತಿಯಲ್ಲಿ ಬರುವ ಪ್ರತಿ ಬೂತ್‌ನಲ್ಲಿ ಹತ್ತು ಸಾವಿರಕ್ಕೂ ಹೆಚ್ಚು ಮೇಲ್ಪಟ್ಟು ಮತದಾರರ ಮ್ಯಾಪಿಂಗ್ ಕಾರ್ಯ ಇನ್ನೂ ಕೂಡ ಪೂರ್ಣಗೊಂಡಿಲ್ಲದೆ ಇರುವುದರಿಂದ ಮುಂದಿನ ದಿನಗಳಲ್ಲಿ ಕಾಂಗ್ರೆಸ್ ಪಕ್ಷದ ಅಮೂಲ್ಯವಾದ ಮತಗಳನ್ನು ನಾವೇ ಕಳೆದುಕೊಳ್ಳುವ ಪರಿಸ್ಥಿತಿ ಬರುತ್ತದೆ .ಅದ್ದರಿಂದ ಪುರಸಭೆ ವ್ಯಾಪ್ತಿಯಲ್ಲಿ ಪ್ರತಿ ಬೂತ್‌ನಲ್ಲಿ ಕೂಡ ಶೇ 100 ರಷ್ಟು ಸಂಪೂರ್ಣವಾಗಿ ಮುಗಿಸುವುದಕ್ಕೆ ಬಿ.ಎಲ್.ಎ. ಅಧಿಕಾರಿಗಳಿಗೆ ನಮ್ಮ ಪಕ್ಷದ ಬಿ.ಎಲ್.ಎ.ಗಳು ಅಗತ್ಯ ಸಹಕಾರ ನೀಡಬೇಕಾಗಿದೆ.ಎಂದು ತಿಳಿಸಿದರು.

ಶಾಸಕ ಜಿ.ಹಂಪಯ್ಯ ನಾಯಕ್. ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಬ್ದುಲ್ ಗಫೂರ್ ಸಾಬ್. ಪಂಚ ಗ್ಯಾರಂಟಿಸಮಿತಿ ಅಧ್ಯಕ್ಷರಾದ ಬಿ.ಕೆ.ಅಮರೇಶಪ್ಪ, ಪುರಸಭೆ ಮಾಜಿ ಸದಸ್ಯರು. ಕಾಂಗ್ರೆಸ್ ಪಕ್ಷದ ಕಡೆಯಿಂದ ನೇಮಿಸಲ್ಪಟ್ಟ ಬಿ.ಎಲ್.ಎ.ಗಳು ಇದ್ದರು.

## ಮತದಾರರ ಪಟ್ಟಿ ಪರಿಷ್ಕರಣ ಸಂವಿಧಾನದ ಹಕ್ಕು ಚ್ಯುತಿ, ನಾಗರೀಕರನ್ನು ಅನಾಥರನ್ನಾಗಿಸುತ್ತದೆ : ಸೈಯದ್ ನಜೀರುದ್ದೀನ್ ಖಾದ್ರಿ ಗುರು.

ಧೈರ್ಯದ ದಾರಿ

**ಮಾನ್ವಿ:** ಕೇಂದ್ರ ಸರ್ಕಾರವು ದೇಶಾದ್ಯಂತ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಎಐಆರ್ ಪ್ರಕ್ರಿಯೆಗೆ ಮುಂದಾಗಿರುವುದನ್ನು ತೀವ್ರವಾಗಿ ಖಂಡಿಸಿದ ಪುರಸಭೆ ಮಾಜಿ ಅಧ್ಯಕ್ಷ ಹಾಗೂ ಕಾಂಗ್ರೆಸ್ ಮುಖಂಡ ಸೈಯದ್ ನಜೀರುದ್ದೀನ್ ಖಾದ್ರಿ ಗುರು ಅವರು ಇದು ಸಂವಿಧಾನ ನೀಡಿದ ಮತದಾನದ ಹಕ್ಕಿನ ಮೇಲೆ ದಾಳಿ. ಲಕ್ಷಾಂತರ ನಾಗರೀಕರನ್ನು ಅನಾಥರನ್ನಾಗಿಸುವ ಷಡ್ಯಂತ್ರ ಎಂದು ಟೀಕಿಸಿದರು.

ಚುನಾವಣಾ ಆಯೋಗವು ಬಿಹಾರದಲ್ಲಿ ನಡೆಸಿರುವ ಎಸ್ ಐಆರ್ ಪ್ರಕ್ರಿಯೆಯನ್ನು ಇದೀಗ ದೇಶದಾದ್ಯಂತ ವಿಸ್ತರಿಸಲು ಹೊರಟಿದೆ. 2002 ರ ಮತದಾರರ ಪಟ್ಟಿಯನ್ನು ಆಧಾರವಾಗಿಟ್ಟುಕೊಂಡು ಜನ್ಮ ಪ್ರಮಾಣ ಪತ್ರ, ಪಾಸ್‌ಪೋರ್ಟ್, ಆಸ್ತಿ ದಾಖಲೆಗಳಂತಹ ದಾಖಲೆಗಳನ್ನು ಕೇಳಲಾಗುತ್ತಿದೆ.

ಆದರೆ ಬಡವರು, ಮಹಿಳೆಯರು, ಅಲೆಮಾರಿಗಳು, ವಲಸೆ ಕಾರ್ಮಿಕರ ಹತ್ತಿರ ಈ ದಾಖಲೆಗಳಿಲ್ಲ. ಆಧಾರ್ ಕಾರ್ಡ್ ನ್ನು ಕೇವಲ ಗುರುತಿನ ಚೀಟಿ ಅಷ್ಟೇ ಎಂದು ಪರಿಗಣಿಸಿರುವುದು ಅನ್ಯಾಯ. ಕ್ಷೇತ್ರ ಮಟ್ಟದ ಅಧಿಕಾರಿಗಳ ವಿವೇಚನಾಧಿಕಾರವನ್ನು ಕಿತ್ತು ಆನ್‌ಲೈನ್ ಪೋರ್ಟಲ್ ನಲ್ಲಿ ಡಾಕ್ಯುಮೆಂಟ್ ಅಪ್ಲೋಡ್ ಆಪ್ಷನ್ ನನ್ನೇ ತೆಗೆದುಹಾಕಲಾಗಿದೆ. ನಿಜವಾದ ಮತದಾರರು



ಡಿಜಿಟಲ್ ಲಿಂಬೋದಲ್ಲಿ ಸಿಲುಕಿದ್ದಾರೆ. ಎಸ್‌ಐಆರ್ ಪ್ರಕ್ರಿಯೆಯು ಪಾರದರ್ಶಕವಾಗಿಲ್ಲ ಮತ್ತು ಇದು ದೊಡ್ಡ ಪ್ರಮಾಣದಲ್ಲಿ ಮತದಾರರನ್ನು ಕೈಬಿಡುವ ಮತ ಕಳ್ಳತನ ಮತ್ತು ವ್ಯವಸ್ಥಿತ ಷಡ್ಯಂತ್ರವಾಗಿದೆ ಎಂದು ಸೈಯದ್ ನಜೀರುದ್ದೀನ್ ಖಾದ್ರಿ ಗುರು ಆಕ್ರೋಶ ವ್ಯಕ್ತಪಡಿಸಿದರು.

## ಪ್ರಧಾನಿ ನರೇಂದ್ರ ಮೋದಿ ಅವರ 12 ವರ್ಷಗಳ ಸುದೀರ್ಘ ಸೇವೆ: ಸಿರವಾರದಲ್ಲಿ ವಿಶೇಷ ಪೂಜೆ



ಧೈರ್ಯದ ದಾರಿ

**ಸಿರವಾರ, ಜೂನ್ 10:** ಭಾರತದ ಪ್ರಧಾನಿ ನರೇಂದ್ರ ಮೋದಿ ಅವರು ದೇಶದ ಪ್ರಧಾನಿಯಾಗಿ ಜೂನ್ 10, 2026ಕ್ಕೆ 12 ವರ್ಷಗಳನ್ನು ಪೂರೈಸಿದ್ದಾರೆ. ಈ ಮೂಲಕ ಅತ್ಯಂತ ಸುದೀರ್ಘ ಅವಧಿಗೆ ಸತತವಾಗಿ ಸೇವೆ ಸಲ್ಲಿಸಿದ ಚುನಾಯಿತ ಪ್ರಧಾನಿ ಎಂಬ ವಿಶಿಷ್ಟ ಗೌರವಕ್ಕೆ ಅವರು ಪಾತ್ರರಾಗಿದ್ದಾರೆ. ಜವಾಹರಲಾಲ್ ನೆಹರು ಅವರ 4,398 ದಿನಗಳ ದಾಖಲೆಯನ್ನು ಸರಿಗಟ್ಟಿರುವ ಹಿನ್ನೆಲೆಯಲ್ಲಿ, ಸಿರವಾರ ಪಟ್ಟಣದ ವಾರ್ಡ್ ನಂ. 2ರಲ್ಲಿರುವ ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನದಲ್ಲಿ ವಿಶೇಷ ಪೂಜಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು.

ಮೋದಿ ಅವರ ಆರೋಗ್ಯ, ಆಯುರಾರೋಗ್ಯ ವೃದ್ಧಿ ಹಾಗೂ ದೇಶದ ಸುಭಿಕ್ಷ ಆಡಳಿತಕ್ಕಾಗಿ ಪ್ರಾರ್ಥನೆ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಸಿರವಾರ ಬಿಜೆಪಿ ಮಂಡಲದ ಪ್ರಧಾನ ಕಾರ್ಯದರ್ಶಿ ಮಲ್ಲಿಕಾರ್ಜುನ ನಾಯಕ ಸಿಕಂಟಿ, "ಪ್ರಧಾನಿ ನರೇಂದ್ರ ಮೋದಿ ಅವರ ಆಡಳಿತದಲ್ಲಿ ಭಾರತವು ಜಗತ್ತಿನ ಶಕ್ತಿಶಾಲಿ ರಾಷ್ಟವಾಗಿ ಹೊರಹೊಮ್ಮುತ್ತಿದೆ. ಆಧುನಿಕ ತಂತ್ರಜ್ಞಾನದ ಅಳವಡಿಕೆ ಮತ್ತು ದೂರದೃಷ್ಟಿಯ ನಾಯಕತ್ವದಿಂದಾಗಿ ಭಾರತವು ಸುಭದ್ರ ರಾಷ್ಟವಾಗಿ ನಿರ್ಮಾಣವಾಗುತ್ತಿದೆ. ಶತ್ರು ರಾಷ್ಟಗಳೂ ಕೂಡ ಭಾರತದತ್ತ ನೋಡುವಂತೆ ಚಾಣಕ್ಯತನದಿಂದ ದೇಶವನ್ನು ಮುನ್ನಡೆಸುತ್ತಿರುವ ಮೋದಿ ಅವರ ನಾಯಕತ್ವ ಶ್ಲಾಘನೀಯ," ಎಂದು ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ಅಯ್ಯಪ್ಪ ಪೂಜಾರಿ, ಹನುಮಂತ್ರಾಯ ನಾಯಕ, ರಾಜು ಮೇದಾರ್, ಸುರೇಶ್ ಕಪ್ಪಲ್, ವಿಶ್ವ ಸಿಕಂಟಿ, ಶರಣು ದಾಸರ್, ರವಿ ಬಡಿಗೇರ, ಕೃಷ್ಣ, ಉದಯ್ ಕಪಲ್, ಶ್ರೀನಿವಾಸ ಕಪಲ್, ವಿನೋದ್, ಗಣೇಶ ದಾಸರ್ ಸೇರಿದಂತೆ ಪಕ್ಷದ ಪದಾಧಿಕಾರಿಗಳು, ಕಾರ್ಯಕರ್ತರು ಮತ್ತು ಅಭಿಮಾನಿಗಳು ಭಾಗವಹಿಸಿದ್ದರು.

## ಯುವಕರು ದುಶ್ಚಟಗಳಿಂದ ದೂರವಿದ್ದು ಸಾಧನೆಗೆ ಹತ್ತಿರವಾಗಲಿ: ಮಹಿಬೂಬ್ ಮದ್ಲಾಪುರ

ಧೈರ್ಯದ ದಾರಿ




**ಮಾನ್ವಿ, ಜೂನ್ 10:** ನೀರಮಾನ್ವಿ ಸರಕಾರಿ ಪ್ರೌಢ ಶಾಲೆಯಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ವಿಶ್ವ ತಂಬಾಕು ವಿರೋಧಿ ದಿನಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮವನ್ನು ಶಾಲಾ ಮಕ್ಕಳೊಂದಿಗೆ ಉದ್ಘಾಟಿಸಲಾಯಿತು.

ಸಂಪನ್ಮೂಲ ವ್ಯಕ್ತಿ ಮಹಿಬೂಬ್ ಮದ್ಲಾಪುರ ಮಾತನಾಡುತ್ತಾ "ವಿದ್ಯಾರ್ಥಿಗಳು ಗುಟ್ಕಾ, ಮದ್ಯಪಾನ, ಧೂಮಪಾನ, ಮೊಬೈಲ್ ಗೇಮಿಂಗ್, ಬೆಟ್ಟಿಂಗ್ ಹಾಗೂ ತಂಬಾಕಿನ ವಿವಿಧ ದುಶ್ಚಟಗಳಿಂದ ದೂರವಿದ್ದು ಸಾಧನೆ ಕಡೆ ಗಮನ ಹರಿಸಬೇಕು.

ತಂಬಾಕು ಸೇವನೆಯಿಂದ ಕ್ಯಾನ್ಸರ್‌ನಂತಹ ಮಾರಣಾಂತಿಕ ಕಾಯಿಲೆಗಳು ಉಂಟಾಗಿ ಅನೇಕ ಕುಟುಂಬಗಳು ಸಂಕಷ್ಟಕ್ಕೆ ಸಿಲುಕುತ್ತಿವೆ" ಎಂದು ಹೇಳಿದರು. "ಉತ್ತಮ ಸ್ನೇಹಿತರ ಸಹವಾಸ, ಪುಸ್ತಕ ಓದು, ಕ್ರೀಡೆ ಹಾಗೂ ಸಂಗೀತದಂತಹ ಹವ್ಯಾಸಗಳನ್ನು ಬೆಳೆಸಿಕೊಳ್ಳಬೇಕು. ದುಶ್ಚಟಗಳಿಂದ ಆರೋಗ್ಯ ಹಾನಿ, ಆರ್ಥಿಕ ಸಮಸ್ಯೆ ಹಾಗೂ ಸಾಮಾಜಿಕ ಅಗೌರವ ಎದುರಾಗುತ್ತದೆ" ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ವಲಯ ಮೇಲ್ವಿಚಾರಕ ಗುರುರಾಜ್ ಮಾತನಾಡಿ ಸಂಸ್ಥೆ ವತಿಯಿಂದ ತಂಬಾಕು ವಿರೋಧಿ ದಿನಾಚರಣೆ, ಮಾದಕ ವಸ್ತು ವಿರೋಧಿ ಜಾಗೃತಿ, ಪರಿಸರ ಹಾಗೂ ಆರೋಗ್ಯ ಸಂಬಂಧಿತ



ಅನೇಕ ಸಾಮಾಜಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ" ಎಂದು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಮುಖ್ಯೋಪಾಧ್ಯಾಯ ಮಕ್ಬೂಲ್ ಅಹ್ಮದ್, ಶಿಕ್ಷಕರಾದ ಜಯಣ್ಣ, ಲಕ್ಷ್ಮೀದೇವಿ ಹಾಗೂ ವಲಯದ ಸೇವಾ ಪ್ರತಿನಿಧಿಗಳು ಉಪಸ್ಥಿತರಿದ್ದರು.

## ಮೊದಲನೇ ಪುಟದಿಂದ

# ರಾಜ್ಯಸಭೆಗೆ ಸ್ಪರ್ಧಿಸುವ ಅಪೇಕ್ಷೆ ಇರಲಿಲ್ಲ, ಬಿಜೆಪಿ-ಜೆಡಿಎಸ್ ಮೈತ್ರಿ ಮತ್ತಷ್ಟು ಗಟ್ಟಿಯಾಗಿರಲಿದೆ : ದೇವೇಗೌಡರು

ಪ್ರಧಾನಿಯಾಗಿ ಕೆಲಸ ಮಾಡಿದ್ದಾರೆ. ದೇಶದ ಪ್ರಗತಿಗೆ ಹಲವಾರು ಕಾರ್ಯಕ್ರಮ ತಂದಿದ್ದಾರೆ. ಆರ್ಥಿಕಾಭಿವೃದ್ಧಿಗೂ ಪ್ರಯತ್ನ ಮಾಡಿದ್ದಾರೆ. ವಿಶ್ವಮಟ್ಟದಲ್ಲಿ ದೇಶದ ಗೌರವವನ್ನು ಹೆಚ್ಚಿಸಿದ್ದಾರೆ. ಅವರು ಸಮರ್ಥ ನಾಯಕರಿದ್ದಾರೆ ಎಂದು ಶ್ಲಾಘಿಸಿದರು.

ಪಕ್ಷ ಸಂಘಟನೆಗೆ ಒತ್ತು : ರಾಜ್ಯದಲ್ಲಿ ಜೆಡಿಎಸ್ ಪಕ್ಷದ ಬೆಳವಣಿಗೆಗೆ ಏನೇನು ಬೇಕೋ ಅದನ್ನು ಮಾಡುತ್ತೇನೆ. ಅದಕ್ಕೆ ಯಾರ ಹಂಗೂ ಇಲ್ಲ. ನಿರ್ಭಯವಾಗಿ ಪಕ್ಷಸಂಘಟನೆ ಮಾಡುತ್ತೇವೆ. ಮುಂದೆ ಜಿಬಿಎ, ಜಿ.ಪಂ., ತಾ.ಪಂ. ಸೇರಿದಂತೆ ನಗರ ಸ್ಥಳೀಯ ಸಂಸ್ಥೆ ಚುನಾವಣೆ ನಡೆಯಲಿದ್ದು, ಬಿಜೆಪಿ ಮತ್ತು ಜೆಡಿಎಸ್ ನಡುವೆ ಸೀಟು ಹೊಂದಾಣಿಕೆ ಮೈತ್ರಿ ಆಗಬೇಕು. ಅವರು ಕರೆದಾಗ ಹೋಗುತ್ತೇನೆ.

ಎಲ್ಲಿ ನನ್ನ ಅವಶ್ಯಕತೆ ಇದೆಯೋ ಅಲ್ಲಿ ಶಕ್ತಿ ಮೀರಿ ಕೆಲಸ ಮಾಡುತ್ತೇನೆ ಎಂದು ಅವರು ಹೇಳಿದರು. ಹಲಸು ಹಾಗೂ ಹುಣಸೆ ಹಣ್ಣಿನ ಮಂಡಳಿ ರಚನೆ ಮಾಡುವ ಭರವಸೆಯನ್ನು ಕೇಂದ್ರ ಸಚಿವರು ಈಡೇರಿಸಿಲ್ಲ. ಈ ಬಗ್ಗೆ ಮತ್ತೊಮ್ಮೆ ಅವರಿಗೆ ಪತ್ರ ಬರೆದು ಮನವಿ ಮಾಡುತ್ತೇನೆ. ಕೇರಳ, ತಮಿಳುನಾಡು, ಕರ್ನಾಟಕದಲ್ಲಿ ಹೆಚ್ಚು ಸಮಸ್ಯೆ ಇದೆ ಎಂದರು.

ಕಬ್ಬನ್‌ಪಾರ್ಕ್ ಮತ್ತು ಲಾಲ್‌ಬಾಗ್‌ನಲ್ಲಿ ಆಯೋಜಿಸಿದ್ದ ಮಾವು, ಹಲಸಿನ ಮೇಳಕ್ಕೆ ಭೇಟಿ ನೀಡಿದ್ದೆ. ಅಲ್ಲಿ ಹಲಸಿನ ಹಣ್ಣು ಕಡಿಮೆ ಇದ್ದಿದ್ದು ಕಂಡುಬಂದಿತು. ಹಳೇ ಮೈಸೂರು ಭಾಗದಲ್ಲಿ ರಾಶಿ ರಾಶಿ ಹಲಸಿನಹಣ್ಣನ್ನು ನೋಡಬಹುದು. ಹಲಸಿನ ಹಣ್ಣಲ್ಲದೆ ಎಳೆಯ ಕಾಯಿಯನ್ನು ಅಡುಗೆಗೂ ಬಳಸುತ್ತಾರೆ. ಮಖಾನ ವಿಚಾರದಲ್ಲಿ ಒಂದು ವಾರದಲ್ಲಿ ನಿರ್ಣಯ ಮಾಡಿದ್ದರು. ಆದರೆ ಹಲಸು ಮಂಡಳಿ ರಚನೆ ವಿಚಾರದಲ್ಲಿ ನೀಡಿದ್ದ ಭರವಸೆ ಈಡೇರಿಸಿಲ್ಲ ಎಂದು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ವಿಧಾನಪರಿಷತ್ ಮಾಜಿ ಸದಸ್ಯರಾದ ಚೌಡರೆಡ್ಡಿ ತೂಪಲ್ಲಿ, ಎಚ್.ಎಂ.ರಮೇಶ್‌ಗೌಡ, ಕೆ.ಎ.ತಿಪ್ಪೆಸ್ವಾಮಿ, ಕಾನೂನು ಘಟಕದ ರಾಜ್ಯಾಧ್ಯಕ್ಷ ಎ.ಪಿ.ರಂಗನಾಥ, ಮುಖಂಡರಾದ ಗುರುರಾಜ ಹುಣಸಿಮರದ್, ಚಂದನ್ ಮತ್ತಿತರರಿದ್ದರು.

# ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರದ ವಸತಿ ನಿಲಯಗಳ ಪ್ರವೇಶಕ್ಕೆ ಅರ್ಜಿ ಆಹ್ವಾನ

**ರಾಯಚೂರು ಜೂನ್ 10:** ರಾಯಚೂರು ತಾಲೂಕ ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯದಿಂದ 2026-27ನೇ ಸಾಲಿಗೆ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ನಿರ್ವಹಣೆಯಾಗುತ್ತಿರುವ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಸತಿ ನಿಲಯಗಳಿಗೆ ಪ್ರವೇಶಕ್ಕಾಗಿ ಎಸ್.ಹೆಚ್.ಪಿ ತಂತ್ರಾಂಶದಡಿ ವಸತಿ ನಿಲಯದ ಪ್ರವೇಶಕ್ಕೆ ಅರ್ಹ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.
ಅರ್ಜಿ ಸಲ್ಲಿಸಲು ಬೇಕಾದ ದಾಖಲಾತಿಗಳು: ಹೊಸದಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ಎಸ್.ಎಸ್.ಪಿ ಐಡಿ ಖಾತೆಯನ್ನು ಸೃಜನೆ ಮಾಡಿಕೊಳ್ಳಬೇಕು. ಎಸ್.ಎಸ್.ಪಿ ಐಡಿ ಖಾತೆಯನ್ನು ಸೃಜನೆ ಮಾಡಿಕೊಳ್ಳುವಾಗ ವಿದ್ಯಾರ್ಥಿಯು ಆಧಾರ್ ಕಾರ್ಡನ್ನು ಬಳಸಿಕೊಂಡು ಖಾತೆಯನ್ನು ಸೃಜನೆ ಮಾಡಿಕೊಳ್ಳುವುದು (ವಿದ್ಯಾರ್ಥಿಯ ಬ್ಯಾಂಕ್‌ಗೆ ಆಧಾರ್ ಕಾರ್ಡ್ ಸೀಡಿಂಗ್ ಆಗಿರಬೇಕು). ಎಸ್.ಎಸ್.ಪಿ. ವಿದ್ಯಾರ್ಥಿಯ ಐ.ಡಿ ಸಂಖ್ಯೆ (ನವೀಕರಣ ವಿದ್ಯಾರ್ಥಿಗಳಿಗೆ). ವಿದ್ಯಾರ್ಥಿ ಅಥವಾ ಪಾಲಕರ ಮೊಬೈಲ್ ಸಂಖ್ಯೆ, ಇ-ಮೇಲ್ ಐಡಿ ವಿದ್ಯಾರ್ಥಿಯ ಸಂಪೂರ್ಣ ವಿಳಾಸ ಹೊಂದಿರುಬೇಕು. ಆರ್.ಡಿ. ಸಂಖ್ಯೆ ಹೊಂದಿರುವ ವಿದ್ಯಾರ್ಥಿಯ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳ(ಚಾಲ್ತಿ ಇರುವ) ಪ್ರತಿ. ಕಾಲೇಜಿನಿಂದ ಪಡೆದ ವ್ಯಾಸಂಗ ಪ್ರಮಾಣ ಪತ್ರ ಪ್ರತಿ. ಎಸ್.ಎಸ್.ಎಲ್.ಸಿ. ನೋಂದಣಿ ಸಂಖ್ಯೆ ಮತ್ತು ವಿಶ್ವವಿದ್ಯಾಲಯಗಳು ನೀಡುವ ನೋಂದಣಿ ಸಂಖ್ಯೆ ಹೊಂದಿರಬೇಕು. ಹಿಂದಿನ ಸಾಲಿನಲ್ಲಿ ತೇರ್ಗಡೆಯಾದ ಕೋರ್ಸಿನ ಅಂಕಪಟ್ಟಿಯ ಪ್ರತಿ ಮತ್ತು ರಜಿಷ್ಟರ್ ಸಂಖ್ಯೆಯೊಂದಿಗೆ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರ ವಸತಿ ನಿಲಯ ಪ್ರವೇಶಕ್ಕಾಗಿ ವೆಬ್‌ಸೈಟ್ ವಿಳಾಸ: https://https://shp.karnataka.gov.in/ ನ್ನು ಸಂಪರ್ಕಿಸಿ ಅರ್ಜಿಯನ್ನು ಜೂನ್ 30ರೊಳಗಾಗಿ ಸಲ್ಲಿಸಬಹುದಾಗಿದೆ.
ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 080532-295603, 8762178819ಗೆ ಅಥವಾ ತಾಲೂಕಾ ಕಚೇರಿಯನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ ಎಂದು ರಾಯಚೂರು ತಾಲೂಕ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳಾದ ರುಕ್ಮಿಣೀ ಬಾಯಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೂನ್ 11ರಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ನೇರ ಸಂದರ್ಶನ

**ರಾಯಚೂರು ಜೂನ್ 09:** ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಜೂನ್ 11ರ ಬೆಳಿಗ್ಗೆ 10ಗಂಟೆಯಿಂದ ಮಧ್ಯಾಹ್ನ 1 ಗಂಟೆವರೆಗೆ ನೇರ ಸಂದರ್ಶನ ಆಯೋಜಿಸಲಾಗಿದ್ದು, ಆಸಕ್ತ ಅಭ್ಯರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗುವಂತೆ ಕೋರಲಾಗಿದೆ. ನೇರ ಸಂದರ್ಶನದಲ್ಲಿ ಎರಡು ಖಾಸಗಿ ಕಂಪನಿಗಳು ಭಾಗವಹಿಸಿ ತಮ್ಮಲ್ಲಿ ಖಾಲಿ ಇರುವ ಹುದ್ದೆಗಳನ್ನು ನೇರವಾಗಿ ಭರ್ತಿ ಮಾಡಿಕೊಳ್ಳಲಿದ್ದಾರೆ.
ಅರ್ಹತೆಗಳು: ಎಸ್.ಎಸ್.ಎಲ್.ಸಿ, ಪಿ.ಯು.ಸಿ ಹಾಗೂ ಎಲ್ಲಾ ಪದವೀಧರ ಆಸಕ್ತ 18 ರಿಂದ 28 ವರ್ಷಗಳ ವರೆಗಿನ ಅಭ್ಯರ್ಥಿಗಳು ಈ ಮೇಳದಲ್ಲಿ ಭಾಗವಹಿಸಬಹುದಾಗಿದೆ.
ವಿದ್ಯಾರ್ಹತೆಯ ಅಂಕಪಟ್ಟಿಗಳ ಜೆರಾಕ್ಸ್ ಪ್ರತಿಗಳು ಮತ್ತು ತಮ್ಮ ಬಯೋಡೆಟಾ, ಆಧಾರ್ ಕಾರ್ಡ್ ಪ್ರತಿ, ಭಾವಚಿತ್ರಗನ್ನು ಸಲ್ಲಿಸಬೇಕು. ನೇರ ಸಂದರ್ಶನದಲ್ಲಿ ಭಾಗವಹಿಸಲು ಯಾವುದೇ ಶುಲ್ಕವಿರುವುದಿಲ್ಲ, ಬದಲಾಗಿ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗಬಹುದು.
ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಬಾಲಾಜಿ ಕಾಂಪ್ಲೆಕ್ಸ್, ನೆಲ ಮಹಡಿ, ಗೂಡ್ ಶೆಡ್ ರಸ್ತೆ, ಸ್ಟೇಷನ್ ಏರಿಯಾ, ರಾಯಚೂರು ಹಾಗೂ ದೂರವಾಣಿ ಸಂಖ್ಯೆ 08532-231684, 9916931616, 9008211750ಗೆ ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ನವೀನ ಕುಮಾರ್ ಸಂಗೇಪಾಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಿಪ್ಲೋಮಾ ಕೋರ್ಸು ಪ್ರವೇಶಕ್ಕೆ ಆಫ್‌ಲೈನ್ ಮೂಲಕ ಅರ್ಜಿ ಆಹ್ವಾನ

**ರಾಯಚೂರು ಜೂನ್ 09:** ರಾಯಚೂರಿನ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ 2026-27ನೇ ಸಾಲಿಗೆ 02 ವರ್ಷಗಳ ಐ.ಟಿ.ಐ, ದ್ವಿತೀಯ ಪಿ.ಯು.ಸಿ ವಿಜ್ಞಾನ ಅಥವಾ ದ್ವಿತೀಯ ಪಿ.ಯು.ಸಿ ತಾಂತ್ರಿಕ ವಿಷಯಗಳು ಉತ್ತೀರ್ಣರಾಗಿರುವ ಅರ್ಹ ಅಭ್ಯರ್ಥಿಗಳಿಂದ ಲ್ಯಾಟರಲ್ ಎಂಟ್ರಿ ಸ್ಕೀಂ ಮುಖಾಂತರ 2ನೇ ವರ್ಷ / 3ನೇ ಸೆಮಿಸ್ಟರ್ ಡಿಪ್ಲೋಮಾ ಕೋರ್ಸುಗಳಿಗೆ ಆಫ್‌ಲೈನ್ ಮೂಲಕ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ.
ಆಸಕ್ತರು ಇಲಾಖೆಯ ಅಧೀಕೃತ ವೆಬ್ ಸೈಟ್‌ನಲ್ಲಿ ಅರ್ಜಿಯನ್ನು ಡೌನ್‌ಲೋಡ್ ಮಾಡಿಕೊಂಡು ಭರ್ತಿ ಮಾಡಿದ ಅರ್ಜಿ ಮತು ಆದ್ಯತಾ ಪಟ್ಟಿಯನ್ನು ಪ್ರವೇಶ ಬಯಸುವ ಸಂಸ್ಥೆಯ ಪ್ರಾಚಾರ್ಯರಿಗೆ ನಿಗದಿತ ದಿನಾಂಕ ಜೂನ್ 20ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.
ಅರ್ಹ ಅಭ್ಯರ್ಥಿಗಳ ಮೆರಿಟ್ ಪಟ್ಟಿ ಜೂನ್ 23ರಂದು ಪ್ರಕಟಣೆ ಮಾಡಲಾಗುತ್ತದೆ. ಮೆರಿಟ್ ಪಟ್ಟಿ ಸಂಬಂಧಿಸಿದಂತೆ ಪರೊಷ್ಕರಣೆ/ತಿದ್ದಪಡೆ ಮನವಿಗೆ ಸಲ್ಲಿಸಲು ಜೂನ್ 25 ಅಂತಿಮ ದಿನಾಂಕವಾಗಿದೆ.
ಜೂನ್ 30 ಅಚಿತಿಮ ಮೆರಟ್ ಪಟ್ಟಿ ಬಿಡುಗಡೆ ಮಾಡಲಾಗುವುದು. ಜುಲೈ 01ರಿಂದ ಜುಲೈ 04ರವರೆಗೆ ಸೀಟು ಆಯ್ಕೆ ಮಾಡಿಕೊಂಡ ಅಭ್ಯರ್ಥಿಗಳು ಮೂಲ ದಾಖಲೆಗಳು ಹಾಗೂ ನಿಗದಿತ ಶುಲ್ಕದೊಂದಿಗೆ ಪ್ರವೇಶ ಪಡೆಯಬಹುದಾಗಿದೆ.
ಜುಲೈ 06ರಿಂದ 10ರವರೆಗೆ ಸೀಟುಗಳು ಭರ್ತಿಯಾಗದೇ ಉಳಿಕೆಯಾದಲ್ಲಿ ಪ್ರಾಂಶುಪಾಲರ ಹಂತದಲ್ಲಿಯೇ ಆಫ್‌ಲೈನ್ ಮೂಲಕ ಸೀಟು ಹಂಚಿಕೆ ಮಾಡಲು ಪ್ರಾರಂಭ ಮತ್ತು ಅಂತಿಮ ದಿನಾಂಕವಾಗಿದೆ.
ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ ವಿಳಾಸ: dtek.karnataka.gov.in or dtetech.karnataka.gov.in / kartechnical ನಲ್ಲಿ ವೀಕ್ಷಣೆ ಮಾಡಬಹುದಾಗಿದೆ.
ಹೆಚ್ಚಿನ ಮಾಹಿತಿಗಾಗಿ ಕಚೇರಿ ಸಮಯದಲ್ಲಿ ಸಂಸ್ಥೆಯ ಪ್ರಾಂಶುಪಾಲರನ್ನು ಸಂಪರ್ಕಿಸಬಹುದಾಗಿದೆ ಎಂದು ರಾಯಚೂರು ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
6360866626

# "ಹಂಪನಗೌಡ ಬಾದರ್ಲಿಗೆ ಮಂತ್ರಿ ಸ್ಥಾನಕ್ಕಾಗಿ ಪಾದಯಾತ್ರೆ ಮಾಡಿ ವಿಶೇಷ ಪೂಜೆ"




ಧೈರ್ಯದ ದಾರಿ

**ಪೋತ್ನಾಳ್ -:** ರಾಗಲಪರ್ವಿ ಜಿಲ್ಲಾ ಪಂಚಾಯತಿ ಕ್ಷೇತ್ರದ ಅಭಿಮಾನಿ ಬಳಗದಿಂದ ಹಾಗೂ ಕಾಂಗ್ರೆಸ್ ಕಾರ್ಯಕರ್ತರಿಂದ ರಾಗಲಪರ್ವಿ ಕ್ರಾಸಿನಿಂದ ಮಂಗಳವಾರ ಪಾದಯಾತ್ರೆ ಮೂಲಕ ಐದು ಕೀ.ಮೀ ದೂರದ ಪೊತ್ನಾಳ್ ಸೀಮೆ ವ್ಯಾಪ್ತಿಗೆ ಬರುವ ರಾಯಚೂರು ಸಿಂಧನೂರು ಮುಖ್ಯ ರಸ್ತೆಯಲ್ಲಿರುವ ಗಾಳಿ ದುರಗಮ್ಮ ದೇವಸ್ಥಾನಕ್ಕೆ ತೆರಳಿ ವಿಶೇಷ ಪೂಜೆ ಸಲ್ಲಿಸಿದರು.

ಹಂಪನಗೌಡ ಬಾದರ್ಲಿಯವರು ಜಿಲ್ಲೆಯ ಹಿರಿಯ ಶಾಸಕರಾಗಿದ್ದು, ಶಿಕ್ಷಣ ಹಾಗೂ ನೀರಾವರಿ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸಿದ್ದಾರೆ. ಸಿಂಧನೂರು ತಾಲೂಕಿನ ಅಂಬಾಮಠದ ಅಂಬಾದೇವಿ ದೇವಸ್ಥಾನದ ಹೊಸ ಕಟ್ಟಡ ಹಾಗೂ ಕ್ಷೇತ್ರದ ಅಭಿವೃದ್ಧಿಗೆ ಸರ್ಕಾರದಿಂದ ವಿಶೇಷ ಅನುದಾನವನ್ನು ತರುವ ಮೂಲಕ ಶಕ್ತಿ ಪೀಠ ಅಂಬಾಮಠದ ಅಭಿವೃದ್ಧಿಗೆ ಶ್ರಮಿಸುತ್ತಿದ್ದಾರೆ. ಇಂತಹವರಿಗೆ ಸಚಿವ ಸ್ಥಾನವನ್ನು ನೀಡಿದಲ್ಲಿ ತಾಲೂಕು ಸೇರಿದಂತೆ ಇಡೀ ರಾಯಚೂರು ಜಿಲ್ಲೆ ಅಭಿವೃದ್ಧಿಯಾಗುವುದರಲ್ಲಿ ಯಾವುದೇ ಸಂದೇಹ ಇಲ್ಲ. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು. ಈಗಿನ ನೂತನ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಅವರು ಹಾಗೂ ಕೆಪಿಸಿಸಿ ರಾಜ್ಯಾಧ್ಯಕ್ಷರಾದ ಬಿ.ಕೆ. ಹರಿಪ್ರಸಾದರವರು ಶಾಸಕ ಹಂಪನಗೌಡರಿಗೆ ಸಚಿವ ಸ್ಥಾನ ನೀಡಲು ಮನಸ್ಸು ಮಾಡಬೇಕೆಂದು ಅವರಲ್ಲಿ ಮನವಿ ಮಾಡುತ್ತೇವೆ ಎಂದರು.
ಈ ಸಂದರ್ಭದಲ್ಲಿ ಹನುಮರೆಡ್ಡೆಪ್ಪಗೌಡ ರಾಮತ್ನಾಳ್, ದೊಡ್ಡಅಮರಯ್ಯ ವಲಕಮದಿನ್ನಿ, ನಾಗರಾಜ ರಾಮತ್ನಾಳ್, ರಾಮಣ್ಣ ಗೊನವಾರ, ಅರುಣಕುಮಾರ ನಾಯಕ ಯಾಪಲಪರ್ವಿ, ದುರಗಪ್ಪ ದಿದ್ದಿಗಿ, ಸಾಲುಮನ್ ವಕೀಲರು, ಸೂಗನಗೌಡ ಪೊಲೀಸ್ ಪಾಟೀಲ್ ಬನ್ನಿಗನೂರು, ಯಾಪಲಪರ್ವಿ ಗ್ರಾಮದ ಶರಣಪ್ಪ, ಚಂದ್ರಶೇಖರ, ನಾಗರೆಡ್ಡಿ, ಸಾಬಣ್ಣ, ಹಾಗೂ ಬಸವರಾಜ ಪುಲದಿನ್ನಿ ಸೇರಿದಂತೆ ಅನೇಕರಿದ್ದರು.

# ಇಂದು ಉಚಿತ ಸ್ಪರ್ಧಾತ್ಮಕ ಪರೀಕ್ಷೆ ಪುಸ್ತಕಗಳ ವಿತರಣೆ

ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ಆರ್.ಜಿ. ಕ್ಯಾಂಪ್ ರಸ್ತೆಯಲ್ಲಿನ ಭೀಮರಾಯ.ಬಿ.ರಾಮಸಮುದ್ರ ಉಚಿತ ಗ್ರಂಥಾಲಯದಲ್ಲಿ ಪೊಲೀಸ್ ಪರೀಕ್ಷೆ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಯನ್ನು ಓದುತ್ತಿರುವ ಗ್ರಾಮೀಣ ಭಾಗದ ಕನ್ನಡ ಮಾಧ್ಯಮದ ವಿದ್ಯಾರ್ಥಿಗಳಿಗಾಗಿ ಉಚಿತವಾಗಿ ಸ್ಪರ್ಧಾತ್ಮಕ ಪರೀಕ್ಷೆ ಪುಸ್ತಕಗಳನ್ನು ಜೂ.11 ರಂದು ಬೆಳಿಗ್ಗೆ 9ಕ್ಕೆ ವಿತರಿಸಲಾಗುತ್ತಿದು ಆಸಕ್ತ ವಿದ್ಯಾರ್ಥಿಗಳು ಪುಸ್ತಕಗಳನ್ನು ಪಡೆದುಕೊಳ್ಳುವಂತೆ ತಹಶೀಲ್ದಾರ್ ಭೀಮರಾಯ.ಬಿ.ರಾಮಸಮುದ್ರ ರವರು ಪ್ರಕಟಣೆಯಲ್ಲಿ ಕೋರಿದ್ದಾರೆ.



# ಪ್ರಧಾನಿ ನರೇಂದ್ರ ಮೋದಿಜಿಯವರ ದೀರ್ಘವಾದಿ ಆಡಳಿತಕ್ಕಾಗಿ ವಿಶೇಷ ಪೂಜೆ



ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ಈಶ್ವರ ದೇವಸ್ಥಾನದಲ್ಲಿ ಭಾರತೀಯ ಜನತಾ ಪಾರ್ಟಿಯ ಮಾನ್ವಿ ಮಂಡಲದ ವತಿಯಿಂದ ಪ್ರಧಾನಿ ನರೇಂದ್ರ ಮೋದಿಜಿ ಯವರು ಅತಿ ಹೆಚ್ಚು ಅವಧಿಗೆ ದೇಶದ ಪ್ರಾಧಾನಿಗಳಾಗಿ ಸೇವೆ ಸಲ್ಲಿಸಿದ ಪ್ರಯುಕ್ತ ವಿಶೇಷ ಪೂಜೆಯನ್ನು ಸಲ್ಲಿಸಿ ಬಿ.ಜೆ.ಪಿ, ಮಾನ್ವಿ ಮಂಡಲ ಅಧ್ಯಕ್ಷರಾದ ವೀರಭದ್ರಗೌಡ ಭೋಗಾವತಿ ಮಾತನಾಡಿ ಜೂನ್ 10 ರಂದು 4399 ದಿನಗಳ ಕಾಲ ದೇಶದ ಪ್ರಧಾನಿಯಾಗಿ ನರೇಂದ್ರ ಮೋದಿಜಿ ಯವರು ದೀರ್ಘವಾದಿ ಆಡಳಿತ ನೀಡಿರುವುದು ದೇಶದ ಇತಿಹಾಸದಲ್ಲೇ ಒಂದು ಅವಿಸ್ಮರಣೀಯ ಸಂಗತಿಯಾಗಿದೆ ಎಂದು ತಿಳಿಸಿದರು.
ಮಾನ್ವಿ ಮಂಡಲ ಪ್ರಧಾನ ಕಾರ್ಯದರ್ಶಿ ಗುರುಸಿದ್ದಪ್ಪ ಕಣ್ಣೂರು, ಜಿಲ್ಲಾ ರೈತ ಮೋರ್ಚಾ ಅಧ್ಯಕ್ಷರಾದ ದೊರೆಬಾಬು, ವೀರನಗೌಡ ವಕೀಲರು ಪೋತ್ನಾಳ, ಶಿವಲಿಂಗಯ್ಯ ಸ್ವಾಮಿ, ಜಗದೀಶ ಒತೂರು, ಕುಮಾರಸ್ವಾಮಿ ಮೇದಾ, ಉಮಾಪತಿ ನಾಯಕ, ಚಂದ್ರಶೇಖರ ನಾಯಕ, ಕೆ.ವೆಂಕಟೇಶ, ವಿಜಯಕುಮಾರ ಮೇಟಿ, ರಾಜೇಂದ್ರ ಭೋಗಾವತಿ,ಈರಣ್ಣ ನಾಯಕ, ಗೋಪಾಲ ಇಬ್ರಾಂಪುರ್, ಸೇರಿದಂತೆ ನೂರಾರು ಕಾರ್ಯಕರ್ತರು ಭಾಗವಹಿಸಿದರು.

# ಡಾ.ಎಂ. ವಸಂತಕುಮಾರ ಅವರ ಸೇವೆ ಅಭಿನಂದನಾರ್ಹ- ರಮೇಶಬಾಬು ಯಾಳಗಿ

**ಮಾನ್ವಿ-** ಮಾನ್ವಿ ಪಟ್ಟಣದ ಮಡಿಲು ಆಸ್ಪತ್ರೆಯ ಮುಖ್ಯಸ್ಥ ಜನರಲ್ ಮೆಡಿಸಿನ್ ತಜ್ಞ ವೈದ್ಯ ಡಾ.ಎಂ ವಸಂತ ಕುಮಾರ ಅವರ ಸಾಮಾಜಿಕ ಕಳಕಳಿಯ ಕಾರ್ಯ ನಿಜಕ್ಕೂ ಶ್ಲಾಘನೀಯ ಮತ್ತು ಅಭಿನಂದನಾರ್ಹ ಎಂದು ಸಾಹಿತಿ ರಮೇಶಬಾಬು ಯಾಳಗಿ ಹೇಳಿದರು.

ಅವರು ಬುಧವಾರದಂದು ಏಷ್ಯಾದ ಪ್ರಮುಖ ಗ್ಯಾಸ್ಟ್ರೋ ಎಂಟ್ರೋಲಾಜಿ ಕೇಂದ್ರವಾದ ಹೈದರಾಬಾದಿನ ಎಐಜಿ ಆಸ್ಪತ್ರೆಗಳು ಆಯೋಜಿಸಿದ್ದ ಫೆಲೋಶಿಪ್ ಫಾರ್ ಫಿಜಿಶಿಯನ್ ಕಾರ್ಯಕ್ರಮದಲ್ಲಿ ಡಾ.ಎಂ.ವಸಂತಕುಮಾರ ಅವರು ಎಫ್ ಎಐಜಿ ಪದವಿ ಪಡೆದ ಪ್ರಯುಕ್ತ ಸನ್ಮಾನಿಸಿ ಗೌರವಿಸಿ ಮಾತನಾಡಿದರು.



ಡಾ.ಎಂ.ವಸಂತಕುಮಾರ ಅವರು ತಮ್ಮ ತಂದೆಯವರಾದ ಎಂ.ಈರಣ್ಣನವರ ಹುಟ್ಟು ಹಬ್ಬದ ಅಂಗವಾಗಿ ಒಂದು ತಿಂಗಳ ಪರ್ಯಂತ ಕಡಿಮೆ ವೆಚ್ಚದಲ್ಲಿ ಸಮಗ್ರ ಆರೋಗ್ಯ ತಪಾಸಣೆ ಏರ್ಪಡಿಸಿದ್ದು ಉತ್ತಮ ಕಾರ್ಯವಾಗಿದೆ ಇದರ ಸದುಪಯೋಗವನ್ನು ಬಹಳಷ್ಟು ಜನ ಪಡೆಯುತ್ತಿರುವುದು ನಮಗೆಲ್ಲ ಖುಷಿ ತಂದಿದೆ ಎಂದ ಯಾಳಗಿ ಅವರು ಆರೋಗ್ಯಯುತ ಸಮಾಜ ನಿರ್ಮಾಣಕ್ಕೆ ಶ್ರಮಿಸುತ್ತಿರುವ ಮಡಿಲು ಆಸ್ಪತ್ರೆಯ ಕಾರ್ಯ ಇತರರಿಗೆ ಮಾದರಿಯಾಗಿದೆ ಎಂದು ಮುಕ್ತಕಂಠದಿಂದ ಪ್ರಶಂಸಿಸಿದರು.

ಈ ಸಂದರ್ಭದಲ್ಲಿ ರೇಖಾದೇವಿ ಯಾಳಗಿ,ರೈತ ಮುಖಂಡ ಬಸವರಾಜ ಮಾಲಿ ಪಾಟೀಲ,
ಮೌಲಪ್ಪ ಚೀಕಲಪರ್ವಿ, ರಾಮಕೃಷ್ಣ, ನವೀನ್ ಮತ್ತು ಆಸ್ಪತ್ರೆಯ ಇತರೆ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ದತ್ತಾತ್ರೇಯ ಪಾಟೀಲ್ ವಿರುದ್ಧ ಎಫ್ಐಆರ್ ಗೆ ಖಂಡನೆ



**ಕಲಬುರಗಿ :ಜೂ.10:** ಕೋಮು ಸೌಹಾರ್ದತೆ ಧಕ್ಕೆ ಹೆಸರಿನಲ್ಲಿ ರಾಜಕೀಯ ದುರುದ್ದೇಶದಿಂದ ಮಾಜಿ ಶಾಸಕ ದತ್ತಾತ್ರೇಯ ಸಿ. ಪಾಟೀಲ್ ರೇವೂರ(ಅಪ್ಪುಗೌಡ) ಅವರ ವಿರುದ್ಧ ಎಫ್ಐಆರ್ ದಾಖಲಿಸಿರುವುದಕ್ಕೆ ಬಿಜೆಪಿ ಕಲಬುರಗಿ ದಕ್ಷಿಣ ಮಂಡಲ ಕಾರ್ಯದರ್ಶಿ ವೀರೇಶ್ ಪಡೋಲಕರ್ ತೀವ್ರವಾಗಿ ಖಂಡಿಸಿದ್ದಾರೆ.

ಜಿಪಂ ಸದಸ್ಯರಾಗಿ ರಾಜಕೀಯ ಜೀವನ ಆರಂಭಿಸಿರುವ ಅಪ್ಪುಗೌಡ ಅವರು, ಕಲಬುರಗಿ ದಕ್ಷಿಣ ಕ್ಷೇತ್ರದಿಂದ ಎರಡು ಬಾರಿ ಶಾಸಕರಾಗಿ, ಕೆಕೆಆರ್ ಡಿಬಿ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದರು. ಆದರೆ ಇವರ ವಿರುದ್ಧ ದಾಖಲಾದ ಎಫ್ಐಆರ್ ಹಿಂದೆ ರಾಜಕೀಯ ಷಡ್ಯಂತ್ರ ಅಡಗಿದೆ.

ಇವರ ರಾಜಕೀಯ ವಿರೋಧಿಗಳು ನಾಲಾಯಕ್ ಪದ ಬಳಸಿ ತೇಜೋವಧೆ ಮಾಡಿ ಅಪಮಾನವೆಸಗಿರುವುದು ಶುದ್ಧ ತಪ್ಪು. ಕೂಡಲೇ ತೇಜೋವಧೆ ಮಾಡಿರುವವರು ಬಹಿರಂಗವಾಗಿ ಕ್ಷಮೆಯಾಚಿಸಬೇಕು. ಅಪ್ಪುಗೌಡರ ಮನೆತನವು ಸುಸಂಸ್ಕೃತ, ಸಂಸ್ಕಾರ ಭರಿತ ಆರೋಗ್ಯಕರ ರಾಜಕೀಯ ಮಾಡಿದವರು. ಆದರೆ ತಮ್ಮ ರಾಜಕೀಯ ಉದ್ದಕ್ಕೂ ಎಂದೆಂದಿಗೂ ಕ್ಷುಲ್ಲಕ ರಾಜಕೀಯ ಮಾಡಿದವರಲ್ಲ.

ಹೀಗಾಗಿ, ತಮ್ಮ ಅಧಿಕಾರಾವಧಿಯಲ್ಲಿ ಯಾರಿಗೂ ಹೀಯಾಳಿಸುವ ಕೆಲಸ ಮಾಡಿಲ್ಲ. ಬದಲಾಗಿ ಸರ್ವ ಸಮಾಜಗಳ ಸಂಕಷ್ಟಗಳಿಗೆ ಸ್ಪಂದಿಸುವ ಗುಣವುಳ್ಳವರಾಗಿದ್ದಾರೆ. ಅಪ್ಪುಗೌಡರ ಬೆನ್ನೆಲುಬು ಆಗಿ ಮರಾಠ ಸಮಾಜ ಅವರ ಬೆನ್ನಿಗೆ ನಿಂತು, ಸಂಪೂರ್ಣವಾಗಿ ಬೆಂಬಲಕ್ಕೆ ಬರಲಿದೆ. ಮಾಜಿ ಸಚಿವ ದಿ. ಖಮರುಲ್ ಇಸ್ಲಾಂ ಗುಲಬರ್ಗಾ ನಗರವನ್ನು ಮಿನಿ ಪಾಕಿಸ್ತಾನ ಮಾಡಲು ಯತ್ನಿಸಿದ್ದರು ಎಂಬ ಹೇಳಿಕೆ ಮುಂದಿಟ್ಟುಕೊಂಡು ಕೇಸ್ ಹಾಕಿರುವುದನ್ನು ಕೂಡಲೇ ಹಿಂಪಡೆಯಬೇಕು. ಒಂದು ವೇಳೆ ಎಫ್ಐಆರ್ ರದ್ದುಪಡಿಸದಿದ್ದರೆ ಉಗ್ರ ಹೋರಾಟ ನಡೆಸಬೇಕಾಗುತ್ತದೆ ಎಂದು ಪತ್ರಿಕಾ ಪ್ರಕಟಣೆಯಲ್ಲಿ ಎಚ್ಚರಿಸಿದ್ದಾರೆ.

# ವೈಚಾರಿಕತೆಯ ಚಿಂತಕ, ಮೇರು ಸಾಹಿತಿ ದೇವನೂರು ಮಹಾದೇವ



**ಕಲಬುರಗಿ :ಜೂ.10:** ದೇವನೂರು ಮಾಹದೇವ ಅವರು ವೈಚಾರಿಕ ಬರಹಗಾರ, ಚಿಂತಕ, ಹೋರಾಟಗಾರ. ಗಾಂಧಿ,

ಕುಸುಮಬಾಲೆ ಅವರ ಪ್ರಮುಖ ಕಾದಂಬರಿ. 'ಪಂಚಮ' ಪತ್ರಿಕೆಯ ಮೂಲಕ ಜನ ಜಾಗೃತಿ ಮೂಡಿಸಿದವರು.ಜೆ.ಪಿ.ಸ್ವಾಗತ ಸಮಿತಿ ಮತ್ತು ಸರ್ವೋದಯ ಕರ್ನಾಟಕ ಪಕ್ಷದ ಅಧ್ಯಕ್ಷರಾಗಿ, ದಲಿತ ಸಂಘರ್ಷ ಸಮಿತಿಯ ಸಂಚಾಲಕರಾಗಿ, ಡಾ.ಬಿ.ಆರ್.ಅಂಬೇಡ್ಕರ್ ಸಾಹಿತ್ಯ ಅನುವಾದ ಮಂಡಲಿ, ಕನ್ನಡ ಕಾವಲು ಸಮಿತಿಯ ಸದಸ್ಯರಾಗಿ ಸೇವೆ ಸಲ್ಲಿಸಿದ್ದಾರೆ ಎಂದು ಉಪನ್ಯಾಸಕ, ಲೇಖಕ ಎಚ್.ಬಿ.ಪಾಟೀಲ ಹೇಳಿದರು. ನಗರದ ಆಳಂದ ರಸ್ತೆಯ ಸಂತೋಷ ಕಾಲನಿ ಕ್ರಾಸ್ ಸಮೀಪದ "ರಿಪಬ್ಲಿಕ್ ಸ್ಪೋಕನ್ ಇಂಗ್ಲೀಷ್ ಅಕಾಡೆಮಿ"ಯಲ್ಲಿ " ಬಸವೇಶ್ವರ ಸಮಾಜ ಸೇವಾ ಬಳಗ"ದ ವತಿಯಿಂದ ಜರುಗಿದ "ಡಾ.ದೇವನೂರು ಮಹಾದೇವರ 78ನೇ ಜನ್ಮದಿನಾಚರಣೆ"ಯ ಪ್ರಯುಕ್ತ " ಡಾ.ದೇವನೂರರ ಬದುಕು-ಬರಹ" ಎಂಬ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡುತ್ತಿದ್ದರು. ರಾಜ್ಯ ಸಾಹಿತ್ಯ ಅಕಾಡೆಮಿ ಪ್ರಶಸ್ತಿ, ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ, ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ, ಅಲ್ಲಮಪ್ರಭು ಪ್ರಶಸ್ತಿ, ಬೋಧಿವೃಕ್ಷ ಪ್ತಶಸ್ತಿ,ವಿ,ಎಂ.ಇನಾಂದಾರ್ ಪ್ರಶಸ್ತಿ, ಭಾರತೀಯ ಭಾಷಾ ಪರಿಷತ್ ಪ್ರಶಸ್ತಿ, ಪದ್ಮಶ್ರೀ ಪ್ರಶಸ್ತಿ, ಮೈಸೂರು ವಿಶ್ವವಿದ್ಯಾನಿಲಯದ ಗೌರವ ಡಾಕ್ಟರೇಟ್, ಕುವೆಂಪು ರಾಷ್ಟ್ರೀಯ ಪ್ರಶಸ್ತಿ, ಪಂಪ ಪ್ರಶಸ್ತಿ ಸೇರಿದಂತೆ ಹೀಗೆ ಅನೇಕ ಪ್ರಶಸ್ತಿ-ಗೌರವಗಳಿಗೆ ಪಾತ್ರರಾಗಿದ್ದಾರೆ ಎಂದರು. ಕಾರ್ಯಕ್ರಮದಲ್ಲಿ ಸಾಹಿತಿ ಶಿವಯೋಗೆಪ್ಪಾ ಎಸ್. ಬಿರಾದಾರ, ಸಂಸ್ಥೆಯ ಅಧ್ಯಕ್ಷ ದತ್ತು ಹಡಪದ, ಸಮಾಜ ಸೇವಕ ದಿನೇಶ್ ಮಿಶ್ರಾ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಡಾ.ಸುಜಾತಾ ಚಲವಾದಿ ಸ್ವಾಭಿಮಾನಿಪುಸ್ತಕ ಪ್ರಶಸ್ತಿಗೆ ಆಯ್ಕೆ



**ವಿಜಯಪುರ, ಜೂ.10:** ಸ್ವಾಭಿಮಾನಿ ಕರ್ನಾಟಕ ವೇದಿಕೆಂಯು ಡಾ. ಸುಜಾತಾ.ಚಲವಾದಿ ಸೇರಿದಂತೆ ಹಲವರಿಗೆ 2025ನೇ ಸಾಲಿನ 'ಸ್ವಾಭಿಮಾನಿ ಪುಸ್ತಕ ಪ್ರಶಸ್ತಿ'ಯನ್ನು ಪ್ರಕಟಿಸಿದೆ.

ಡಾ. ಸಿ. ಸೋಮಶೇಖರ್ ಸರ್ವಮಂಗಳ ದತ್ತಿ ಪ್ರಶಸ್ತಿಗೆ ಡಾ. ಸುಜಾತಾ ಚಲವಾದಿ ಅವರ 'ಮನುಷ್ಯ ಮತ್ತು ಪ್ರೀತಿ' ಪ್ರಬಂಧ ಸಂಕಲನವನ್ನು ಆಯ್ಕೆ ಮಾಡಲಾಗಿದೆ.

ಕರ್ನಾಟಕ ಲೇಖಕಿಯರ ಸಂಘದ ಅಧ್ಯಕ್ಷ ಡಾ. ಆರ್.ಸುನಂದಮ್ಮ, ವೇದಿಕೆಯ ಅಧ್ಯಕ್ಷ ಡಾ. ದ್ವಾರನಕುಂಟೆ

ಪಾತಣ್ಣ ಹಾಗೂ ಬೆಸಗರಹಳ್ಳಿ ರಾಮಣ್ಣ ಪ್ರತಿಷ್ಠಾನದ ಅಧ್ಯಕ್ಷ ಎಚ್.ಆರ್ ಸುಜಾತ ಅವರ ನೇತೃತ್ವದ ಸಮಿತಿಯು ಪುರಸ್ಕೃತರನ್ನು ಆಯ್ಕೆ ಮಾಡಿದೆ. ಜೂ.13ರಂದು ಸಂಜೆ 5 ಗಂಟೆಗೆ ಶೇಷಾದ್ರಿಪುರಂ ಕಾಲೇಜಿನಲ್ಲಿ ಪ್ರೋ. ಎಸ್.ಜಿ.ಸಿದ್ದರಾಮಯ್ಯ ಅವರು ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

# ಸಂಗೀತ ಸರ್ವರಿಗೂ ಪ್ರಿಯವಾದದ್ದು :ನಿತಿನ್ ಗುತ್ತೇದಾರ್



**ಕಲಬುರಗಿ :ಜೂ.10:** ಸಂಗೀತ ಸರ್ವರಿಗೂ ಪ್ರಿಯವಾದದ್ದು, ಸಂಗೀತದಿಂದ ಶಾಂತಿ ನೆಮ್ಮದಿ ಪ್ರಾಪ್ತವಾಗುತ್ತದೆ, ನಮ್ಮ ಕುಟುಂಬ ಸದಾಕಾಲ ಸಂಗೀತಕ್ಕೆ ಪ್ರೋತ್ಸಾಹ ನೀಡುತ್ತಾ ಬಂದಿದ್ದೇವೆ ಎಂದು ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷ ನಿತಿನ್ ಗುತ್ತೇದಾರ ಹೇಳಿದರು. ಅವರು ಕಲಬುರಗಿಯ ಕನ್ನಡ ಭವನದ ಸುವರ್ಣ ಸಭಾ ಮಂಟಪದಲ್ಲಿ ಕರ್ನಾಟಕ ಕಲಾ ಸಾಹಿತ್ಯ ಸಂಸ್ಕೃತಿ ಸೇವಾ ಸಂಸ್ಥೆ ಕಲಬುರಗಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಇವರ ಸಂಯುಕ್ತ ಆಶ್ರಯದಲ್ಲಿ ಏರ್ಪಡಿಸಿದ್ದ ಸಂಗೀತ ಸೌರಭ ಹಾಗೂ 2026 ನೇ ಸಾಲಿನ ರಾಜ್ಯಮಟ್ಟದ ಕರ್ನಾಟಕ ಭೂಷಣ ಪ್ರಶಸ್ತಿ ವಿತರಣಾ ಸಮಾರಂಭದ ಉದ್ಘಾಟಕರಾಗಿ ಮಾತನಾಡುತ್ತ ಮಗುವಿನ ಜನನದಿಂದ ಸಾಯುವವರೆಗೂ ಸಂಗೀತ ಪ್ರಿಯನಾಗಿದ್ದಾನೆ ಗರ್ಭದಲ್ಲಿರುವಾಗಲೇ ಸಂಗೀತವನ್ನು ಆಲಿಸುತ್ತಾ ತನ್ನ ಇಡೀ ಜೀವನವನ್ನು ಸಂಗೀತಮಯ ಮಾಡಿಕೊಂಡಿದ್ದಾನೆ, ಸಂಗೀತಕ್ಕೆ ಬಹಳಷ್ಟು ಶಕ್ತಿ ಇದೆ, ಮನಸ್ಸಿನ ಶಾಂತಿ ನೆಮ್ಮದಿಗಾಗಿ ನಾವು ಸಂಗೀತವನ್ನು ಕೇಳುತ್ತೇವೆ ಎಂದು ಹೇಳಿದರು. ಕಾರ್ಯಕ್ರಮದ ಜ್ಯೋತಿ ಬೆಳಗಿಸಿದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಅಧ್ಯಕ್ಷ ಹಾಗೂ ವಿಜಯವಾಣಿ ಕನ್ನಡ ದಿನಪತ್ರಿಕೆಯ ಸ್ಥಾನಿಕ ಸಂಪಾದಕರಾದ ಬಾಬುರಾವ್ ಯಡ್ರಾಮಿಯವರು ಮಾತನಾಡುತ್ತಾ ಕಲೆ ಸಾಹಿತ್ಯ ಸಂಗೀತ ನಮ್ಮ ಸಂಸ್ಕೃತಿಯ ಪ್ರತಿಕ, ಮೊದಲಿನ ಕಾಲದಲ್ಲಿ ಕಲೆಗೆ ರಾಜ್ಯಾಶ್ರಯವಿತ್ತು ಆದರೆ ಇಂದು ಮರೆಯಾಗಿದೆ, ನಮ್ಮ ಭಾಗದಲ್ಲಿರುವ ಪ್ರಖ್ಯಾತ ಕಲಾವಿದರು ನಮ್ಮ ಭಾಗದ ಹೆಮ್ಮೆ, ಕೇವಲ ಕಟ್ಟಡಗಳು ಬಂದರೆ ಅದು ಪ್ರಗತಿಯ ಸಂಕೇತ ಅಲ್ಲ, ಈ ಭಾಗದ ಸಾಹಿತ್ಯ ಸಂಸ್ಕೃತಿ ಬೆಳೆದಾಗ ಮಾತ್ರ ಈ ಭಾಗ ಸವರ್ಂಗಿಣ ಪ್ರಗತಿ ಸಾಧ್ಯ ಎಂದು ಅವರು ಹೇಳಿದರು. ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಜಿಲ್ಲಾ ಕೋಲಿ ಕಬ್ಬಲಿಗ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ನೀಲಕಂಠ ಜಮಾದಾರ್ ಅವರು ಮಾತನಾಡುತ್ತಾ ಸಂಗೀತ ಸೇವೆ ಇದೊಂದು ಕಾಯಕ, ಸಂಗೀತ ಮನಸ್ಸಿಗೆ ನೆಮ್ಮದಿ ಶಾಂತಿ ನೀಡುತ್ತದೆ, ಸಂಗೀತಕ್ಕೆ ಎಲ್ಲವನ್ನೂ ಮರೆಸುವ ಶಕ್ತಿ ಇದೆ ಎಂದು ಹೇಳಿದರು. ಕರ್ನಾಟಕ ರಾಜ್ಯ ನೌಕರರ ಸಂಘದ ಜಿಲ್ಲಾ ಘಟಕದ ರಾಜ್ಯ ಪರಿಷತ್ ಸದಸ್ಯ ಧರ್ಮರಾಜ್ ಜವಳಿ ಮಾತನಾಡುತ್ತಾ ಸಂಗೀತಕ್ಕೆ ಕೇವಲ ಮನುಷ್ಯರಷ್ಟೇ ಅಲ್ಲ ಪ್ರಾಣಿ ಪಕ್ಷೀ ಗಳು, ಸಸ್ಯಗಳು ಸಂಗೀತವನ್ನು ಆಲಿಸುತ್ತವೆ ಎಂದು ವಿಜ್ಞಾನಿಗಳು ಕಂಡುಹಿಡಿದಿದ್ದಾರೆ ಸಂಗೀತ ಸರ್ವವ್ಯಾಪಿ ಎಂದು ಹೇಳಿದರು.

ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ವಿಜಯ್ ಕುಮಾರ್ ಪಾಟೀಲ್ ತೇಗಲ್ ತಿಪ್ಪಿ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ ಹಿರಿಯ ಕಾಂಗ್ರೆಸ್ ಮುಖಂಡರಾದ ಶಿವಶರಣಪ್ಪ ಕೋಬಾಳ್ ಅವರು ಮಾತನಾಡುತ್ತಾ ನಮ್ಮ ಕುಟುಂಬ ಸಂಗೀತ ಪರಂಪರೆಯಿಂದ ಬಂದಿದೆ, ಪ್ರತಿಭೆ ಯಾರ ಸ್ವತ್ತು ಅಲ್ಲ, ನಮ್ಮ ಮನೆಯಲ್ಲಿ ಎಲ್ಲರೂ ಸಂಗೀತಪ್ರಿಯರು, ಸಂಗೀತಕ್ಕೆ ಮನಸೋತವರು, ನನ್ನ ಸಹೋದರನಿಗೆ 2003 ರಲ್ಲಿ ರಾಜ್ಯೋತ್ಸವ ಪ್ರಶಸ್ತಿ ಕೊಡಿಸಿದೆ, ಚಿಕ್ಕ ವಯಸ್ಸಿನಲ್ಲಿ ಪ್ರಶಸ್ತಿ ನೀಡಿರುವುದಕ್ಕೆ ಕೆಲವರು ತಗಾದೆ ತೆಗೆದಿದ್ದರೂ, ಆದರೆ ಪ್ರತಿಭೆಗೆ ವಯಸ್ಸಿಲ್ಲ ಎಂದು ಹೇಳಿದರು. ಮುಖ್ಯ ಅತಿಥಿಗಳಾಗಿ ಶ್ರೀ ಭೋಗೇಶ್ವರ ಶಾಲೆ ಸಿದ್ದಗಂಗಾ ಶಿಕ್ಷಣ ಸಂಸ್ಥೆ ಕಲಬುರಗಿ ಅಧ್ಯಕ್ಷರಾದ ಲಕ್ಷ್ಮಿಪುತ್ರ ರಾಂಪುರೆ, ಸಿದ್ದರಾಮಪ್ಪ ಅಲಗುಡ್ಕರ್. ಕರ್ನಾಟಕ ಕಲಾ ಸಾಹಿತ್ಯ ಸಂಸ್ಕೃತಿ ಸೇವಾ ಸಂಸ್ಥೆಯ ಅಧ್ಯಕ್ಷರು ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಬಾಬುರಾವ್ ಕೊಬಾಳ್ ಪ್ರಾಸ್ತಾವಿಕವಾಗಿ ಮಾತನಾಡಿ ಸರ್ವರನ್ನು ಸ್ವಾಗತಿಸಿದರು.

ಇದೇ ಸಂದರ್ಭದಲ್ಲಿ 2026 ನೆ ಸಾಲಿನ ರಾಜ್ಯಮಟ್ಟದ ಕರ್ನಾಟಕ ಭೂಷಣ ಪ್ರಶಸ್ತಿ ವಿತರಿಸಲಾಯಿತು. ಡಾ ಶ್ರೀದೇವಿ ದೇವಿಂದ್ರಪ್ಪ ಕಲ್ಯಾಣ್, ಸುಗುರೇಶ್ ವಾರದ್ ರಂಗಂಪೇಟೆ ಸುರೇಶ್ ಕುಮಾರ್ ಎಸ್ ಹಿರೇಮಠ್ ವಿಜಯ್ ಕುಮಾರ್ ಸಾಲಿಮಠ, ಚಂದ್ರು ಹಿರೇಮಠ ಪತ್ರಕರ್ತರು, ಮುದ್ದಪ್ಪ ಅಪ್ಪಗೋಳ ಶಿವಯ್ಯ ಮಠಪತಿ, ಶರಣಬಸಪ್ಪ ಅಪ್ಪಾಸಾಬ ಪಾಟೀಲ್, ಭೀಮರಾಯ ಎಲ್ ಕಟ್ಟಿಮನಿ, ಚಂದ್ರಶ್ಯಾ ಗೌಡ ಮಾಲಿಪಾಟೀಲ್ ಜಗದೀಶ್ ಮಾನುರಂಗಂಪೇಟ, ಮಲ್ಲಿಕಾರ್ಜುನ್ ಎಸ್ ರೋಣ ದ, ರಾಜೇಂದ್ರ ಜಳಕಿ ಸಾಹಿತಿಗಳು, ವಿಶ್ವನಾಥ್ ತೋಟ್ನಲ್ಲಿ ನಾಗರಾಜ್ ಎಸ್ ಒಂಟೆ, ಶ್ರೀಮತಿ ಪ್ರಿಯಾ ಗಡ್ಡಾಳೆ, ಶ್ರೀಮತಿ ರಜನಿ ಶಿವಾನಂದ, ರಾಜಶೇಖರ್ ಹಿರೇಮಠ, ಶ್ರೀಮತಿ ಸಾಧನಾ ನಾಗರಾಜ್ ಮುಲ್ಗಿ, ಶರಣು ಸಾಳೇರ್ , ಚಾಂದ್ ಸಾಬ್ ಮುಖ್ಯ ಗುರುಗಳು ಇವರಿಗೆ ವಿತರಿಸಲಾಯಿತು. ಇದೇ ಸಂದರ್ಭದಲ್ಲಿ ಸಂಗೀತ ಸಂಭ್ರಮ ಕಾರ್ಯಕ್ರಮದಲ್ಲಿ ಜನಪ್ರಿಯ ಕಲಾವಿದರಾದ ಸಂಗೀತ ಶಿಕ್ಷಕರು ಕಮಲಾಪುರ್ ಮಹಾಂತಯ್ಯ ಮಂಟಾಳ ಪ್ರಾಥನ ಗೀತೆಯನ್ನು ನಡೆಸಿಕೊಟ್ಟರು , ಕಥಾ ಕೀರ್ತನೆ ನಾಗಲಿಂಗಯ್ಯ ಸ್ಥಾವರಮಠ ಸುಂಟನೂರು, ಶಾಸ್ತ್ರೀಯ ಸಂಗೀತ ಶಿವಶಂಕರ್ ಬಿರಾದಾರ್ ಆಕಾಶ ವಾಣಿ ಕಲಾವಿದರು ಕಲಬುರ್ಗಿ, ತತ್ವಪದ ಸೂರ್ಯಕಾಂತ್ ಡುಮ್ಮ ಆಕಾಶ್ ವಾಣಿ ಕಲಾವಿದರು ಕಲಬುರ್ಗಿ, ಸಿತಾರ್ ವಾದನ ಸಂಗೀತ ಶಿಕ್ಷಕರು ಶಂಕರ್ ರುದ್ರವಾಡಿ , ದಾಸವಾಣಿ ಸೈದಪ್ಪ ಸಪ್ಪನ್ಗೋಳ್, ವಚನ ಗಾಯನ ಸಿದ್ಧಾರ್ಥ ಚಿಮ್ಮಾಯಿದಲಾಯಿ, ಆಕಾಶ್ ವಾಣಿ ಕಲಾವಿದರು ಕಲ್ಬುರ್ಗಿ, ಜಾನಪದ ಗೀತೆ ವಿಜಯಲಕ್ಷ್ಮಿ ಎಸ್ ಕೆಂಗನಾಳ, ಭರತನಾಟ್ಯ ಪ್ರಿಯಾ ನೃತ್ಯಲಯ ಕಲಾ ಸಂಸ್ಥೆ ಕಲಬುರ್ಗಿ , ತಬಲಾ ಸಾತ್ ಬಸವರಾಜ್ ಚಲಗೇರಿ ಆಕಾಶ್ ವಾಣಿ ಕಲಾವಿದರು ಕಲಬುರ್ಗಿ , ಅಡಿವೇಶ್ ಕುಮಾರ್ ಗದಗ್ ಆಕಾಶ್ ವಾಣಿ ಕಲಾವಿದರು ಕಲಬುರ್ಗಿ, ಹಾರ್ಮೋನಿಯಂ ಸಾಥ್ ಶಿವಕುಮಾರ್ ಜಾಲಹಳ್ಳಿ ಆಕಾಶ್ ವಾಣಿ ಕಲಾವಿದರು ಕಲಬುರ್ಗಿ, ಅನಿಲ್ ಮಠಪತಿ ಭಾಗವಹಿಸಿದ್ದರು.

# ಗಾಣಗಾಪೂರಕ್ಕೆ ಡಿ.ಸಿ. ಭೇಟಿ:ದತ್ತನ ಕ್ಷೇತ್ರದಲ್ಲಿನ ಅಭಿವೃದ್ಧಿ ಕಾಮಗಾರಿಗಳ ಪರಿಶೀಲನೆ



**ಕಲಬುರಗಿ,ಜೂ.10:** ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಅವರು ಮಂಗಳವಾರ ಜಿಲ್ಲೆಯ ಅಫಜಲಪೂರ ತಾಲೂಕಿನ ದತ್ತನ ಸುಕ್ಷೇತ್ರವಾದ ಐತಿಹಾಸಿಕ ದೇವಲ ಗಾಣಗಾಗಪುರ ಕ್ಷೇತ್ರಕ್ಕೆ ಭೇಟಿ ನೀಡಿ ದೇವಸ್ಥಾನ ಮತ್ತ ಅದರ ಸುತ್ತುಮುತ್ತಲು ನಡೆಯುತ್ತಿರುವ ವಿವಿಧ ಪ್ರವಾಸಿ ಮೂಲಸೌಕರ್ಯ ಹಾಗೂ ಅಭಿವೃದ್ಧಿ ಕಾಮಗಾರಿಗಳ ಕುರಿತು ಪರಿಶೀಲನೆ ನಡೆಸಿದರು.

ದತ್ತನ ಸನ್ನಿಧಾನಕ್ಕೆ ಭೇಟಿ ನೀಡಿ ಆರತಿ ಬೆಳಗಿ ದತ್ತನ ದರ್ಶನ ಪಡೆದುಕೊಂಡ ಜಿಲ್ಲಾಧಿಕಾರಿಗಳು ನಂತರ ದೇವಸ್ಥಾನ ಸುತ್ತ ನಡೆಯುತ್ತಿರುವ ಕಾಮಗಾರಿಗಳನ್ನು ವೀಕ್ಷಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ನೆರೆ ರಾಜಗಳಿಂದ ಲಕ್ಷಾಂತರ ಸಂಖ್ಯೆಯಲ್ಲಿ ಬರುವ ಭಕ್ತಾದಿಗಳಿಗೆ ಇಲ್ಲಿ ಕುಡಿಯುವ ನೀರು, ಶೌಚಾಲಯ ಸೇರಿದಂತೆ ಅಗತ್ಯ ಮೂಲ ಸೌಲಭ್ಯಗಳನ್ನು ಒದಗಿಸಬೇಕು. ಕ್ಷೇತ್ರದಾದ್ಯಂತ ಸ್ವಚ್ಛತೆ ಕಾಪಾಡಿಕೊಳ್ಳಬೇಕು. ಭಕ್ತಾದಿಗಳಿಗೆ ಯಾವುದೇ ರೀತಿಯ ತೊಂದರೆ ಆಗದಂತೆ ದೇವಸ್ಥಾನ ಆಡಳಿತ ಮಂಡಳಿ ಕಾರ್ಯನಿರ್ವಹಿಸಬೇಕು ಎಂದರಲ್ಲದೆ ಪ್ರಗತಿಯಲ್ಲಿರುವ ವಿವಿಧ ಮೂಲಸೌಕರ್ಯ ಕಾಮಗಾರಿಗಳಿಗೆ ವೇಗ ನೀಡಿ ಕಾಲಮಿತಿಯಲ್ಲಿ ಪೂರೈಸಬೇಕು ಎಂದು ದೇವಸ್ಥಾನದ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಂತರ ಡಿ.ಸಿ ಅವರು ಗಾಣಗಾಪುರ್ ಬ್ರಿಜ್ ಕಮ್ ಬ್ಯಾರೇಜ್ ಗೆ ಭೇಟಿ ನೀಡಿ, ಅಲ್ಲಲ್ಲಿ ಗ್ರಿಲ್ ಮುರಿದಿರುವುದರಿಂದ ಕೂಡಲೆ ದುರಸ್ತಿ ಮಾಡುವಂತೆ ನೀರಾವರಿ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಇನ್ನು ಅಫಜಲಪೂರ ಹೋಗುವ ಮಾರ್ಗದಲ್ಲಿ ಅತನೂರ ರೈತ ಸಂಪರ್ಕ ಕೇಂದ್ರಕ್ಕೆ ಭೇಟಿ ನೀಡಿ ರೈತರಿಗೆ ಬಿತ್ತನೆ ಬೀಜ ಮತ್ತು ಅಫಜಲಪೂರ ಪಟ್ಟಣದಲ್ಲಿನ ಆರ್.ಎಸ್.ಕೆ ಕೇಂದ್ರಕ್ಕೆ ಭೇಟಿ ನೀಡಿ ರೈತರಿಗೆ ರಸಗೊಬ್ಬರ ವಿತರಣೆ ಮಾಡಿದಲ್ಲದೆ ಪಟ್ಟಣದ ಎರಡ್ಮೂರು ರಸಗೊಬ್ಬರ ಮಾರಾಟ ಅಂಗಡಿಗಲಿಗೆ ದಿಢೀರ್ ಭೇಟಿ ನೀಡಿ ದಾಸ್ತಾನು, ಮಾರಾಟ, ಪಿ.ಓ.ಎಸ್ ಅಪಡೇಟ್ ಮಾಡುತ್ತಿರುವ ಕುರಿತು ಖುದ್ದಾಗಿ ಪರಿಶೀಲಿಸಿದರು. ಡಿ.ಎ.ಪಿ., ಯೂರಿಯಾ ನಿಗದಿತ ದರಕ್ಕಿಂತ ಹಡಚ್ಚಿನ ದರಕ್ಕೆ ಮಾರಾಟ ಮಾಡಿದರೆ ಮುಲಾಜಿಲ್ಲದೆ ಕ್ರಮ ತೆಗೆದುಕೊಳ್ಳಬೇಕಾಗುತ್ತದೆ ಅಂಗಡಿ ಮಾಲೀಕರಿಗೆ ಎಚ್ಚರಿಕೆ ನೀಡಿದರು. ನಂತರ ತಹಸಿಲ್ದಾರ್ ಕಚೇರಿ ಆವರಣದಲ್ಲಿ ಪುರಸಭೆ ಮತ್ತು ಕಂದಾಯ ಅಧಿಕಾರಿಗಳ ಸಭೆ ನಡೆಸಿದ ಜಿಲ್ಲಾಧಿಕಾರಿಗಳು, ಪಟ್ಟಣ ಸಾರ್ವಜನಿಕರಿಗೆ ಅಗತ್ಯ ಮೂಲಸೌಕರ್ಯ ಕಲ್ಪಿಸುವುದು ಪುರಸಭೆಯ ಜವಾಬ್ದಾರಿಯಾಗಿದೆ.ಅದನ್ನು ಕಟ್ಟುನಿಟ್ಟಾಗಿ ಮಾಡಬೇಕು. ಇನ್ನು ಮಸತೃ ಇಲಾಖೆಯಾಗಿರುವ ಕಂದಾಯ ಇಲಾಖೆಯು ಜನಸ್ನೇಹಿಯಾಗಿ ಕಾರ್ಯನಿರ್ವಹಿಸಬೇಕು. ಯಾವುದೇ ಕಾರಣಕ್ಕೂ ಸಾರ್ವಜನಿಕರನ್ನು ಅನಗತ್ಯ ಕಚೇರಿಗೆ ಅಲೆದಾಡಿಸಬಾರದು ಎಂದು ಸಿಬ್ಬಂದಿಗಳಿಗೆ ಸೂಚನೆ ನೀಡಿದರು.

ಪ್ರೋಬೇಷನರ್ ಐ.ಎ.ಎಸ್. ಅಧಿಕಾರಿ ಶಿಖರ್ ಮೋಘಾ, ಕಲಬುರಗಿ ಉಪ ವಿಭಾಗದ ಸಹಾಯಕ ಆಯುಕ್ತೆ ಸಾಹಿತ್ಯಾ ಆಲದಕಟ್ಟಿ, ಅಫಜಲಪೂರ ತಹಶೀಲ್ದಾರ ಸಂಜೀವಕುಮಾರ್ ದಾಸರ್, ಶ್ರೀ ದತ್ತಾತ್ರೆಯ ದೇವಸ್ಥಾನದ ಕಾರ್ಯನಿರ್ವಾಹಕ ಅಧಿಕಾರಿ ಶಿವಕಾಂತಮ್ಮ ಸೇರಿದಂತೆ ತಾಲೂಕು ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

# ಜಂಕ್ಷನ್, ವೃತ್ತಗಳಲ್ಲಿ ಸುಗಮ ಸಂಚಾರಕ್ಕೆ ತ್ವರಿತ ಕ್ರಮ ಜಿಲ್ಲಾಧಿಕಾರಿ ಸೂಚನೆ

**ಮಂಗಳೂರು**–ಮಂಗಳೂರು ನಗರ ಹಾಗೂ ಜಿಲ್ಲೆಯ ವಿವಿಧ ಕಡೆಗಳಲ್ಲಿ ಜಂಕ್ಷನ್ ಹಾಗೂ ವೃತ್ತಗಳಲ್ಲಿ ಸುಗಮ ಸಂಚಾರಕ್ಕೆ ಸ್ಥಳೀಯ ನಗರ ಸಂಸ್ಥೆ ಹಾಗೂ ಪೊಲೀಸ್ ಇಲಾಖೆ ಜಂಟಿಯಾಗಿ ಪರಿಶೀಲಿಸಿ ಕ್ರಮಕೈಗೊಳ್ಳುವಂತೆ ಜಿಲ್ಲಾಧಿಕಾರಿ ದರ್ಶನ್ ಹೆಚ್.ವಿ ಸೂಚಿಸಿದ್ದಾರೆ.

ಅವರು ಮಂಗಳವಾರ ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದ ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಿಲ್ಲೆಯ ಹಲವು ಜಂಕ್ಷನ್, ವೃತ್ತಗಳಲ್ಲಿ ಹಾಗೂ ಮುಖ್ಯ ರಸ್ತೆಗಳಲ್ಲಿ ಪಾರ್ಕಿಂಗ್, ಒತ್ತುವರಿ, ಬೀದಿ ವ್ಯಾಪಾರದಿಂದ ಸುಗಮ ವಾಹನ ಸಂಚಾರಕ್ಕೆ ಅಡ್ಡಿಯಾಗುತ್ತಿರುವ ಬಗ್ಗೆ ಸಾರ್ವಜನಿಕರಿಂದ ಹಲವು ದೂರುಗಳು ಬಂದಿವೆ. ಸಂಚಾರ ನಿಯಂತ್ರಣಕ್ಕೆ ಕ್ರಮ ಕೈಗೊಂಡರೂ, ವಾಹನ ಸಂಚಾರಕ್ಕೆ ತೊಂದರೆಯಾಗುತ್ತಿರುವ ಗಮನಕ್ಕೆ ಬಂದಿರುತ್ತದೆ. ಈ ನಿಟ್ಟಿನಲ್ಲಿ ನಗರ ಸ್ಥಳೀಯ ಸಂಸ್ಥೆಗಳು, ಆರ್.ಟಿ.ಓ, ಪೊಲೀಸ್ ಇಲಾಖೆಯೊಂದಿಗೆ ಜಂಟಿಯಾಗಿ ಪರಿಶೀಲಿಸಿ ಕೈಗೊಂಡು ಸುಗಮ ಸಂಚಾರಕ್ಕೆ ವ್ಯವಸ್ಥೆ ಮಾಡುವಂತೆ ಜಿಲ್ಲಾಧಿಕಾರಿಗಳು ತಿಳಿಸಿದರು.

ಸಭೆಯಲ್ಲಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಯೋಜನಾ ನಿರ್ದೇಶಕ ಅಬ್ದುಲ್ಲಾ ಜಾವಿದ್ ಅಝ್ಮಿ ಮಾತನಾಡಿ, ರಾಷ್ಟ್ರೀಯ ಹೆದ್ದಾರಿಯಲ್ಲಿ ಹಳೆಯಂಗಡಿಯಿಂದ ತಲಪಾಡಿಯವರೆಗೆ ಪ್ರಮುಖ ಜಂಕ್ಷನ್ ವೃತ್ತಗಳಲ್ಲಿ ಸಂಚಾರ ನಿಯಂತ್ರಣಕ್ಕೆ ಹಲವಾರು ಕ್ರಮ ಕೈಗೊಳ್ಳಲಾಗಿದೆ. ಟ್ರಾಫಿಕ್ ಸಿಗ್ನಲ್, ಝೀಬ್ರಾ ಮಾಕಿರ್ಂಗ್, ವೇಗ ನಿಯಂತ್ರಕ ಸೇರಿದಂತೆ ವಾಹನಗಳ ಸುಗಮ ಸಂಚಾರ ಹಾಗೂ ಸಾರ್ವಜನಿಕರ ಓಡಾಟಕ್ಕೆ ಅನುಕೂಲವಾಗುವಂತೆ ಪ್ರಮುಖ ಕ್ರಮ ಕೈಗೊಳ್ಳಲಾಗಿದೆ. ರಸ್ತೆ ಅಪಘಾತಗಳಿಗೆ ಕಾರಣವಾಗುತ್ತಿದ್ದ ಡಿವೈಡರ್ ಕ್ರಾಸಿಂಗ್‌ಗಳನ್ನು ಹಲವಡೆ ಮುಚ್ಚಲಾಗಿದೆ ಎಂದು ತಿಳಿಸಿದರು.

ಬೈಕಂಪಾಡಿ ಕೈಗಾರಿಕಾ ಪ್ರದೇಶಕ್ಕೆ ರಾಷ್ಟ್ರೀಯ ಹೆದ್ದಾರಿಯಿಂದ ಪ್ರವೇಶಿಸಲು ಅಂಡಪಾಸ್ ಕಾಮಗಾರಿ ಪ್ರಗತಿಯಲ್ಲಿದೆ. ನಂತೂರು ಜಂಕ್ಷನ್ ಅಗಲೀಕರಣವು ನಡೆಯುತ್ತಿದ್ದು, ಕೆಪಿಟಿಯಿಂದ ನಂತೂವರೆಗೆ ಸರ್ವಿಸ್ ರಸ್ತೆ ಕಾಮಗಾರಿ ನಡೆಯುತ್ತಿದೆ ಎಂದು ತಿಳಿಸಿದರು.

ಕಲ್ಲಾಪು, ಜೆಪ್ಪಿನಮೊಗರು, ತೊಕ್ಕೊಟ್ಟು ಜಂಕ್ಷನ್‌ನಲ್ಲಿ ಹೆದ್ದಾರಿ ಒತ್ತುವರಿ ಮಾಡಿ ವ್ಯಾಪಾರ ಮಾಡುವುದನ್ನು ತೆರವುಗೊಳಿಸಲು ಕ್ರಮ ಕೈಗೊಳ್ಳಬೇಕು ಎಂದು ಸಮಿತಿ ಸದಸ್ಯರು ಸಭೆಗೆ ತಿಳಿಸಿದರು.

ಮೀನು ಲಾರಿ ನೀರು ಸೋರಿಕೆ

ನಗರದಲ್ಲಿ ಸಂಚರಿಸುತ್ತಿರುವ ಮೀನಿನ ಲಾರಿಗಳಿಂದ ನೀರು ಸೋರಿಕೆಯಾಗಿ ದುರ್ವಾಸನೆ ಮತ್ತು ಸಾರ್ವಜನಿಕರ ಸಂಚಾರಕ್ಕೆ ತೊಂದರೆಯಾಗುತ್ತಿರುವ ಬಗ್ಗೆ ನಿರಂತರ ದೂರುಗಳು ಬರುತ್ತಿರುವ ಹಿನ್ನಲೆಯಲ್ಲಿ ಮೀನಿನ ಕಾರ್ಖಾನೆ ಹಾಗೂ ಉದ್ಯಮಿಗಳ ಸಭೆಯನ್ನು ಪೊಲೀಸ್ ಇಲಾಖೆ ನಡೆಸಲಾಗಿದೆ. ಪ್ರಸ್ತುತ ಕೇರಳದಲ್ಲಿ ರಾಷ್ಟ್ರೀಯ ಹೆದ್ದಾರಿಯ ಅಲ್ಲಲ್ಲಿ ಮೀನಿನ ಲಾರಿಗಳ ನೀರುಗಳನ್ನು ವಿಸರ್ಜಿಸಲು ಸೆಪ್ಟಿಕ್ ಟ್ಯಾಂಕ್‌ಗಳನ್ನು ನಿರ್ಮಿಸಲಾಗಿದೆ. ಇದೇ ರೀತಿ ಜಿಲ್ಲೆಯ ತಲಪಾಡಿ ಮತ್ತು ಮುಲ್ಕಿಯಲ್ಲಿ ಸೆಪ್ಟಿಕ್ ಟ್ಯಾಂಕ್ ನಿರ್ಮಿಸಿದರೆ ತ್ಯಾಜ್ಯ ನೀರನ್ನು ಅಲ್ಲಿ ವಿಸರ್ಜಿಸಿ ರಸ್ತೆಯಲ್ಲಿ ನೀರು ಸೋರಿಕೆಯನ್ನು ತಡೆಗಟ್ಟಬಹುದು ಎಂದು ಉದ್ಯಮಿಗಳು ತಿಳಿಸಿದ್ದಾರೆ. ಈ ನಿಟ್ಟಿನಲ್ಲಿ ಜಿಲ್ಲಾಡಳಿತ ಕ್ರಮ ಕೈಗೊಳ್ಳಬೇಕು ಎಂದು ಟ್ರಾಫಿಕ್ ಪೊಲೀಸ್ ಅಧಿಕಾರಿಗಳು ಸಭೆಗೆ ತಿಳಿಸಿದರು.

ಮಂಗಳೂರು ನಗರದ ಸ್ಟೇಟ್‌ಬ್ಯಾಂಕ್ ಹ್ಯಾಮಿಲ್ಟನ್ ವೃತ್ತವನ್ನು ವೈಜ್ಞಾನಿಕವಾಗಿ ನಿರ್ಮಿಸಲು ಎನ್.ಐ.ಟಿ.ಕೆ ವತಿಯಿಂದ ಮಹಾನಗರಪಾಲಿಕೆಗೆ ವರದಿ ನೀಡಲಾಗಿದ್ದು, ಅದರಂತೆ ಹ್ಯಾಮಿಲ್ಟನ್ ವೃತ್ತದ ನಕ್ಷೆಯನ್ನು ಸಲ್ಲಿಸಲಾಗಿದೆ. ಇದನ್ನು ಪರಿಶೀಲಿಸುವಂತೆ ಜಿಲ್ಲಾಧಿಕಾರಿಗಳು ಸಂಚಾರ ಪೊಲೀಸ್ ಅಧಿಕಾರಿಗಳಿಗೆ ಸೂಚಿಸಿದರು. ಈ ಬಗ್ಗೆ ತ್ವರಿತವಾಗಿ ಕ್ರಮ ಕೈಗೊಳ್ಳಲು ಜಿಲ್ಲಾಧಿಕಾರಿಗಳು ನಗರಪಾಲಿಕೆಗೆ ಸೂಚಿಸಿದರು.

ನಗರದ ಪಂಪ್‌ವೆಲ್‌ನಲ್ಲಿ ಬಸ್‌ಸ್ಟ್ಯಾಂಡ್ ನಿರ್ಮಿಸಲು ಕಾದಿರಿಸಲಾಗಿರುವ 7 ಎಕರೆ ಜಮೀನಿನಲ್ಲಿ 2 ಎಕರೆ ಕೆ.ಎಸ್.ಆರ್.ಟಿ.ಸಿಗೆ ಹಾಗೂ ಉಳಿದ 5 ಎಕರೆ ಖಾಸಗಿ ಬಸ್‌ಸ್ಟ್ಯಾಂಡ್ ನಿರ್ಮಿಸಲು ಕ್ರಮ ಕೈಗೊಳ್ಳಬೇಕು.

ಮಂಗಳೂರು ನಗರದ ಸಂಚಾರ ವ್ಯವಸ್ಥೆಯನ್ನು ಸುಗಮಗೊಳಿಸುವ ಈ ಮಹತ್ವದ ಯೋಜನೆಗೆ ಮಹಾನಗರಪಾಲಿಕೆ ಹಾಗೂ ಕೆ.ಎಸ್.ಆರ್.ಟಿ.ಸಿ ಅಧಿಕಾರಿಗಳು ವಿಳಂಭವಿಲ್ಲದೆ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳು ನಿರ್ದೇಶಿಸಿದರು.

ಹಂಪನಕಟ್ಟೆ, ಸ್ಟೇಟ್‌ಬ್ಯಾಂಕ್, ಸೆಂಟ್ರಲ್ ಮಾರ್ಕೆಟ್ ಪ್ರದೇಶಗಳಲ್ಲಿ



ಫುಟ್‌ಪಾತ್ ಅತಿಕ್ರಮಿಸಿ ಬೀದಿ ವ್ಯಾಪಾರ ಮಾಡುತ್ತಿರುವ ಬಗ್ಗೆ ಮಹಾನಗರಪಾಲಿಕೆಯಿಂದ ನಿರಂತರವಾಗಿ ಕಾರ್ಯಚರಣೆ ನಡೆಸಲಾಗುತ್ತಿದೆ. ಮಹಾನಗರಪಾಲಿಕೆ ಐಡಿ ಕಾರ್ಡ್ ಇರುವವರನ್ನು ಹೊರತುಪಡಿಸಿ ಇತರರಿಗೆ ಬೀದಿ ವ್ಯಾಪಾರ ಮಾಡಲು ಅವಕಾಶವಿಲ್ಲ ಎಂದು ಮಹಾನಗರಪಾಲಿಕೆ ಆಯುಕ್ತ ರವಿಚಂದ್ರ ನಾಯಕ್ ತಿಳಿಸಿದರು.

ಮಂಗಳಾದೇವಿಯಲ್ಲಿ ನಿರ್ಮಿಸಲಾಗಿರುವ ನೂತನ ಬಸ್‌ಸ್ಟ್ಯಾಂಡ್‌ನಿಂದ ಆ ಭಾಗದ ಎಲ್ಲಾ ಬಸ್ಸುಗಳು ಸಂಚಾರ ಆರಂಭಿಸುವ ಬಗ್ಗೆ ಬಸ್ ಮಾಲಕರೊಂದಿಗೆ ಸಭೆ ನಡೆಸಲಾಗಿದ್ದು, ಶೀಘ್ರದಲ್ಲಿ ಕಾರ್ಯಾಚರಣೆಗೊಳ್ಳಲಿದೆ ಎಂದು ಟ್ರಾಫಿಕ್ ಪೊಲೀಸ್ ಅಧಿಕಾರಿಗಳು ಸಭೆಗೆ ತಿಳಿಸಿದರು.

ಜಿಲ್ಲಾ ಪೊಲೀಸ್ ಅಧೀಕ್ಷಕ ಡಾ. ಅರುಣ್ ಕೆ. ಮಾತನಾಡಿ, ನಿರಂತರ ಅಪಘಾತಗಳಿಗೆ ಕಾರಣವಾಗುತ್ತಿರುವ ಪ್ರಮುಖ ಸ್ಥಳಗಳ ಬಗ್ಗೆ ಪೊಲೀಸ್ ಇಲಾಖೆಯಿಂದ ರಾಷ್ಟ್ರೀಯ ಹೆದ್ದಾರಿ ಮತ್ತು ಲೋಕೋಪಯೋಗಿ ಇಲಾಖೆ ವರದಿ ನೀಡಲಾಗಿದ್ದು, ಕೂಡಲೇ ಇಲ್ಲಿನ ಸಂಚಾರ ನಿಯಂತ್ರಣಕ್ಕೆ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

384 ಡ್ರೈವಿಂಗ್ ಲೈಸೆನ್ಸ್‌ಗಳನ್ನು ಅಮಾನತುಪೊಲೀಸ್ ಇಲಾಖೆ ಹಾಗೂ ಆರ್.ಟಿ.ಓ.ಯಿಂದ ತಪಾಸಣೆ ನಡೆಸಿ, 2025ರಿಂದ 2026 ಏಪ್ರಿಲ್ 30ರವರೆಗೆ ಮದ್ಯ ಸೇವಿಸಿ ವಾಹನ ಚಾಲನೆ ಮಾಡಿದ ಬಗ್ಗೆ 1855 ಪ್ರಕರಣಗಳು, ಶಾಲಾ ವಾಹನಗಳಲ್ಲಿ ಮಿತಿಮೀರಿ ಮಕ್ಕಳ ಸಾಗಿಸಿರುವ 99 ಪ್ರಕರಣಗಳು, ಟಿಂಟೆಡ್ ಗ್ಲಾಸ್ ಅಳವಡಿಸಿದ 12 ಪ್ರಕರಣಗಳು, ಕರ್ಕಶ ಹಾರ್ನ್ ವಿರುದ್ಧ 201 ಕೇಸ್‌ಗಳು ಹಾಗೂ ಮಿತಿಮೀರಿದ ಭಾರ ಸಾಗಿಸಿದ 184 ಪ್ರಕರಣಗಳನ್ನು ದಾಖಲಿಸಿ ದಂಡವ ವಸೂಲಿ ಮಾಡಲಾಗಿದೆ.

ಅದೇ ರೀತಿ 2025 ರಿಂದ ಇದುವರೆಗೆ ಜಿಲ್ಲೆಯಲ್ಲಿ 433 ಮಾರಣಾಂತಿಕ ಅಪಘಾತ ಪ್ರಕರಣಗಳು ವರದಿಯಾಗಿದ್ದು, ಈ ಸಂಬಂಧ 384 ಡ್ರೈವಿಂಗ್ ಲೈಸೆನ್ಸ್‌ಗಳನ್ನು ಅಮಾನತುಗೊಳಿಸಲಾಗಿದೆ ಎಂದು ಸಭೆಯಲ್ಲಿ ತಿಳಿಸಲಾಯಿತು.

ಸಭೆಯಲ್ಲಿ ಮಂಗಳೂರು ಉಪ ವಿಭಾಗಾಧಿಕಾರಿ ಮೀನಾಕ್ಷಿ ಆರ್ಯ, ಲೋಕೋಪಯೋಗಿ ಇಲಾಖೆ ಕಾರ್ಯಕಾರಿ ಅಭಿಯಂತರ ರಾಘವೇಂದ್ರ ನಾಯ್ಕ್, ಮಂಗಳೂರು ನಗರ ವ್ಯಾಪ್ತಿಯ ಸಂಚಾರಿ ಪೊಲೀಸ್ ಇನ್ಸ್‌ಪೆಕ್ಟಗಳು ಉಪಸ್ಥಿತರಿದ್ದರು.

# ಪಾಟಾಳಿ ಯಾನೆ ಗಾಣಿಗ ಸಮಾಜ ಸೇವಾ ಸಂಘ ನೂತನ ಸಮಿತಿ ಪದಗ್ರಹಣ



ಪಾಟಾಳಿ ಯಾನೆ ಗಾಣಿಗ ಸಮಾಜ ಸೇವಾ ಸಂಘದ ಮಹಾಸಭೆಯಲ್ಲಿ ಆಯ್ಕೆಯಾದ ನೂತನ ಕಾರ್ಯಕಾರಿ ಸಮಿತಿಯ ಸದಸ್ಯರ ಪದಗ್ರಹಣ ಕಾರ್ಯಕ್ರಮ ಹಾಗೂ ಉಪಸಮಿತಿಗಳ ರಚನೆ ಭಾನುವಾರ ಸುಳ್ಯ ಕೇರ್ಪಳ ಸಂಧ್ಯಾರಶ್ಮಿ ಸಭಾಭವನದಲ್ಲಿ ನಡೆಯಿತು.

ನೂತನ ಕಾರ್ಯಕಾರಿ ಸಮಿತಿ ಆಧ್ಯಕ್ಷ ಸುರೇಶ್ ಕರ್ಲಪ್ಪಾಡಿ ನೇತೃತ್ವದ ಸಮಿತಿಯಲ್ಲಿ ಕಾರ್ಯದರ್ಶಿ ಗೋಪಾಲಕೃಷ್ಣ ಮೊರಂಗಲ್ಲು, ಕೋಶಾಧಿಕಾರಿ ರಾಧಾಕೃಷ್ಣ ಬೇರ್ಪಡ್ಕ, ಉಪಾಧ್ಯಕ್ಷೆ ಹೇಮಲತಾ ಕಲ್ಲುಗುಂಡಿ, ಜೊತೆಕಾರ್ಯದರ್ಶಿ ನಿತೀಶ್ ಎರ್ಮೆಟ್ಟಿ, ಸಂಘಟನಾ ಕಾರ್ಯದರ್ಶಿ ವಿಜಯಕುಮಾರ್ ಎರ್ಮೆಟ್ಟಿ, ಹಾಗೂ ನಿರ್ದೇಶಕರುಗಳಾಗಿ ವೆಂಕಟ್ರಮಣ ಬೇರ್ಪಡ್ಕ, ಚಂದ್ರಶೇಖರ ಉದ್ದಂತಡ್ಕ, ಸಂಜಯ್ ನೆಟ್ಟಾರು, ಸಚಿತ್ ಕಲ್ಮಡ್ಕ, ಕೇಶವ ಮೊರಂಗಲ್ಲು, ಪ್ರವೀಣ್ ಕುಮಾರ್ ಜಯನಗರ, ಸೌಮ್ಯಾ ಇರಂತಮಜಲು, ಸತ್ಯಾ ಕೊಲ್ಲಮೊಗ್ರ ಕನಕಮಜಲು, ವಿಶಾಲಾಕ್ಷಿ ಮೊರಂಗಲ್ಲು ಹಾಗೂ ಸಂಘದ ಆಂತರಿಕ ಲೆಕ್ಕಪರಿಶೋಧಕರಾಗಿ ಮಹಾಲಿಂಗನ್ ಬಾಜತ್ತೊಟ್ಟಿ ಮತ್ತು ಸಂಘದ ಕಾನೂನು ಸಲಹೆಗಾರರಾಗಿ ವಕೀಲ ನಾರಾಯಣ ಕೆ ಹಾಗೂ ಸಂಘದ ಗೌರವ ಸಲಹೆಗಾರರಾಗಿ ಶಂಕರ ಪಾಟಾಳಿ ಪರಿವಾರಕಾನ, ನಾರಾಯಣ ಪಾಟಾಳಿ ನಾವೂರು ಮತ್ತು ಚಂದ ಕುಡೆಕಲ್ಲು ಪದಗ್ರಹಣ ಸ್ವೀಕರಿಸಿದರು.

ಪದಗ್ರಹಣ ಸಭೆಯ ಅಧ್ಯಕ್ಷತೆಯನ್ನು ನಿರ್ಗಮಿತ ಅಧ್ಯಕ್ಷ ವೆಂಕಟ್ರಮಣ ಬೇರ್ಪಡ್ಕ ವಹಿಸಿ ನೂತನ ಪದಾಧಿಕಾರಿಗಳಿಗೆ ಪದಗ್ರಹಣ ನೆರವೇರಿಸಿದರು.

ಇದೇ ಸಂಧರ್ಭದಲ್ಲಿ ಸಂಘದ ಉಪಸಮಿತಿಗಳಾದ ಗ್ರಾಮವಾರು ಸಮಿತಿ ಹಾಗೂ ಮಹಿಳಾ ಸಮಿತಿಗಳನ್ನು ರಚಿಸಲಾಯಿತು ಗ್ರಾಮವಾರು ಸಮಿತಿ ಸಂಚಾಲರಾಗಿ ಉದಯರವಿ ಕಲ್ಚಾರು ಹಾಗೂ ಸಹ ಸಂಚಾಲಕರಾಗಿ ಸೀತಾರಾಮ ಕರ್ಲಪ್ಪಾಡಿ ಮಹಿಳಾ ಸಮಿತಿ ಸಂಚಾಲಕಿಯಾಗಿ ವಿಶಾಲಾ ಕರ್ಲಪ್ಪಾಡಿ ಹಾಗೂ ಸಹಸಂಚಾಲಕಿಯಾಗಿ ಪ್ರೇಮಾ ಚಂದ ಕುಡೆಕಲ್ಲು ಇವರನ್ನು ನೇಮಿಸಿಕೊಳ್ಳಲಾಯಿತು.

ನೂತನ ಗ್ರಾಮವಾರು ಸಮಿತಿಯ ಸದಸ್ಯರುಗಳಾಗಿ ಪ್ರಸಾದ್ ಸುಮೀ ನಿಲಯ ಜಯನಗರ, ಲೋಕೇಶ್ ಕರ್ಲಪ್ಪಾಡಿ, ಶಂಕರ ಬಡ್ಡಡ್ಕ, ಶಶಿಧರ ನೆಲ್ಲಿಕುಂಜೆ, ನಾರಾಯಣ ಸಂಕೇಶ, ಪ್ರದೀಪ್ ಹಳಿಯಡ್ಕ, ಜನಾರ್ಧನ ನೀರಬಿದಿರೆ, ದಾಮೋದರ ಅಡ್ಕಾರ್, ಗಣೇಶ್ ಪರ್ಲಿಕಜೆ ಐವರ್ನಾಡು, ದಿನೇಶ್ ಹೊಸೂರು, ಶಿವಪ್ರಸಾದ್ ಪೇರಾಲು, ಗಣೇಶ್ ಪಾಜಪಳ್ಳ, ನಾಗೇಶ್ ಪೆರಾಜೆ, ಲಕ್ಷ್ಮೀಶ ಬೆಳ್ಳಾರೆ, ಸುರೇಶ್ ಕಂದ್ರಪ್ಪಾಡಿ, ನವೀನ್ ಕೊಯನಾಡು, ಜಗದೀಶ್ ಮಠ, ತೀರ್ಥರಾಮ ಮೊರಂಗಲ್ಲು, ಪ್ರದೀಪ್ ಪೆರಾಜೆ, ಪ್ರಶಾಂತ್ ಸೂಂತೋಡು, ಗಿರಿಧರ ಗುತ್ತಿಗಾರು, ಶಶಿಧರ ಕೈವಲ್ತಡ್ಕ, ಮತ್ತು ರವೀಂದ್ರ ಹಳಿಯಡ್ಕ ಹಾಗೂ ಮಹಿಳಾ ಸಮಿತಿಯ ಸದಸ್ಯರುಗಳಾಗಿ ನಯನಾ ಕಾಟಿಪಳ್ಳ, ಅನುತಾ ಕರ್ಲಪ್ಪಾಡಿ, ಸವಿತಾ ಹಳಿಯಡ್ಕ, ಅಕ್ಷತಾ ಬಡ್ಡೆಕಲ್ಲು, ಸುಮನಾ ಹಳಿಯಡ್ಕ, ಪುಷ್ಪಾಲತಾ ಬೆಟ್ಟಂಪಾಡಿ, ಅಂಬಿಕಾ ಮಹಾಬಲಡ್ಕ, ಹರಿಣಾಕ್ಷಿ ಮಹಾಬಲಡ್ಕ, ವಿದ್ಯಾ ಮಾಧವ ಕರ್ಲಪ್ಪಾಡಿ, ಜಯಂತಿ ಕರ್ಲಪ್ಪಾಡಿ, ಆಶಾ ಕೋಲ್ಚಾರು, ಜಯಲತಾ ಕೇರ್ಪಳ, ಹರಿಣಾಕ್ಷಿ ನಾರಾಯಣ ಶಾಂತಿನಗರ, ಸರಸ್ವತಿ ಬೆಟ್ಟಂಪಾಡಿ, ಶಾಂತಲಾ ಅಡ್ಕಾರು, ಅನಿತಾ ಅಡ್ಕಾರು, ಸರಸ್ವತಿ ಕೈವಲ್ತಡ್ಕ, ಪ್ರೇಮಾ ದಿವಾಕರ ನ್ಯೆಯ್ಯೋಣಿ, ರವಿಕಲಾ ಮೊರಂಗಲ್ಲು, ಲಲಿತಾ ಉಬರಡ್ಕ, ವಿಜಯ ವಿಶ್ವನಾಥ ಜಯನಗರ, ದಮಯಂತಿ ಕರ್ಲಪ್ಪಾಡಿ ಹಾಗೂ ಮಾಧ್ಯಮ ಸಮಿತಿ ಸದಸ್ಯರುಗಳಾಗಿ ಮಿಥುನ್ ಕರ್ಲಪ್ಪಾಡಿ,ಸುಖೇಶ್ ಅಡ್ಕಾರ್ ಹಾಗೂ ಗಾಯತ್ರಿ ಪ್ರಶಾಂತ್ ಪೆರಾಜೆ ಇವರುಗಳನ್ನು ಅಯ್ಕೆಮಾಡಿಕೊಳ್ಳಲಾಯಿತು. ಸಂಜಯ್ ನೆಟ್ಟಾರು ಸ್ವಾಗತಿಸಿ, ಗೋಪಾಲಕೃಷ್ಣ ಮೊರಂಗಲ್ಲು ವಂದಿಸಿ ಸಚಿತ್ ಕಲ್ಮಡ್ಕ ಕಾರ್ಯಕ್ರಮ ನಿರೂಪಿಸಿದರು

# ಸಂಪಾಜೆಯಲ್ಲಿ ವ್ಯವಸ್ಥಿತ ಚೆಕ್ ಪೋಸ್ಟ್ ನಿರ್ಮಿಸಿ ನಿಗಾ ವಹಿಸಲು ಕೊಡಗು ಡಿಸಿ ಸೂಚನೆ

**ಸುಳ್ಯ:**ಮುಂಗಾರು ಪ್ರಾರಂಭವಾಗಿದ್ದು, ಮುಂದಿನ ಮಳೆಗಾಲದ ದಿನಗಳಲ್ಲಿ ನದಿಪಾತ್ರಗಳಲ್ಲಿ ನೀರಿನ ಹರಿವು ಹೆಚ್ಚಾಗಲಿದ್ದು, ಸಾರ್ವಜನಿಕರ ಸುರಕ್ಷತೆಯ ಮತ್ತು ಸಾರ್ವಜನಿಕ ಆಸ್ತಿ ಪಾಸ್ತಿಗಳ ರಕ್ಷಣೆಯ ಹಿತದೃಷ್ಟಿಯಿಂದ ಮರಳುಗಾರಿಕೆ, ಮರದ ದಿಮ್ಮಿಗಳ ಸಾಗಾಣೆ ಮತ್ತು ಇತರೆ ಸರಕು ಸಾಗಾಣಿಕೆ ಮಾಡುವ ಭಾರೀ ವಾಹನಗಳು ಕೊಡಗು ಜಿಲ್ಲೆಯಾದ್ಯಂತ ಸಂಚಾರ ನಿಷೇಧ ಮಾಡಿ ಕೊಡಗು ಡಿಸಿ ಆದೇಶ ಮಾಡಿದ್ದಾರೆ.

ಕೊಡಗು ಜಿಲ್ಲೆಯಲ್ಲಿ ಮುಂಗಾರು ಮಳೆ ಹೆಚ್ಚಾಗುವ ದಿನಗಳಲ್ಲಿ ರಸ್ತೆಯ ಪರಿಸ್ಥಿತಿ ಹದಗೆಡುತ್ತದೆಯಲ್ಲದೆ ಅಧಿಕ ಭಾರ ತುಂಬಿದ ಭಾರೀ ಸರಕು ಸಾಗಾಣೆ ವಾಹನಗಳು ದಿನನಿತ್ಯ ಸಂಚರಿಸುವುದರಿಂದ ರಸ್ತೆಯ ಬದಿಗಳ ಮಣ್ಣು ಭೂಕುಸಿತದಿಂದಾಗಿ ರಸ್ತೆಯ ಮೇಲೆ ಮಣ್ಣು ಬಿದ್ದು, ರಸ್ತೆ ಸಂಚಾರಕ್ಕೆ ತೊಂದರೆಯಾಗಿ ಸಾಕಷ್ಟು ಅಪಘಾತಗಳಿಗೆ ಕಾರಣವಾಗುತ್ತಿರುತ್ತದೆ.

ಆದ್ದರಿಂದ ಕರ್ನಾಟಕ ಪೊಲೀಸ್ ಕಾಯ್ದೆ, ಡಿಸಾಸ್ಟರ್ ಮ್ಯಾನೇಜ್‌ಮೆಂಟ್ ಆಕ್ಟ್, ಮೋಟಾರು ವಾಹನಗಳ ಕಾಯ್ದೆ ಹಾಗೂ ಕರ್ನಾಟಕ ಮೋಟಾರು ವಾಹನಗಳ ನಿಯಮಗಳ ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ ಪ್ರಕಾರ ಸ್ಥಳೀಯರ, ವಾಹನ ಸವಾರರ ಹಾಗೂ ಸಾರ್ವಜನಿಕ ಆಸ್ತಿಪಾಸ್ತಿಗಳ ಸುರಕ್ಷತೆಯ ಹಿತದೃಷ್ಟಿಯಿಂದ ಕೊಡಗು ಜಿಲ್ಲೆಯಾದ್ಯಂತ ಜೂನ್, 10 ರಿಂದ ಜುಲೈ, 09 ರವರೆಗೆ ವಾಹನ ಸಂಚಾರ ವ್ಯವಸ್ಥೆ ನಿರ್ವಹಿಸಲು ಜಿಲ್ಲಾ ದಂಡಾಧಿಕಾರಿ ಮತ್ತು ಪ್ರಾದೇಶಿಕ ಸಾರಿಗೆ ಪ್ರಾಧಿಕಾರದ ಅಧ್ಯಕ್ಷರಾದ ಎಸ್.ಜೆ.ಸೋಮಶೇಖರ್ ಅವರು ಆದೇಶಿಸಿದ್ದಾರೆ.

ನಿಭಂದಿತ ವಾಹನಗಳು:

ಎಲ್ಲಾ ರೀತಿಯ ಮರದ ದಿಮ್ಮಿ ಮತ್ತು ಮರಳು ಸಾಗಾಣಿಕೆ ವಾಹನಗಳು, ವಾಹನದ ನೋಂದಣಿ ತೂಕ 18,500 ಕೆ.ಜಿ.ಗಿಂತ ಹೆಚ್ಚಿನ ಸರಕು ಸಾಗಾಣೆ ಮಾಡುವ ಸರಕು ಸಾಗಾಣಿಕೆ ವಾಹನಗಳು, ಭಾರೀ ವಾಹನಗಳಾದ ಬುಲೆಟ್ ಟ್ಯಾಂಕರ್, ಶಿಪ್ ಕಾರ್ಗೋ ಕಂಟೈನರ್ಸ್, ಲಾಂಗ್ ಚಾಸಿಸ್ (ಮಲ್ಟಿ ಆಕ್ಸಿಲ್) ವಾಹನಗಳು/ ಆರ್ಟಿಕ್ಯೂಲೇಟೆಡ್ ವಾಹನಗಳ ಸಂಚಾರವನ್ನು ನಿಷೆಧಿಸಿದೆ.

ನಿಭಂದದಿಂದ ವಿನಾಯಿತಿ ನೀಡಿದ ವಾಹನಗಳು:

ಅಡುಗೆ ಅನಿಲ ಮತ್ತು ಇಂಧನ ಪೂರೈಕೆ ವಾಹನಗಳು, ಹಾಲು ಪೂರೈಕೆ ವಾಹನಗಳು, ಸರಕಾರಿ ಕೆಲಸದ ನಿಮಿತ್ತ ಉಪಯೋಗಿಸಲ್ಪಡುವ ವಾಹನಗಳು, ಶಾಲಾ ಕಾಲೇಜು ಮತ್ತು ಸಾರ್ವಜನಿಕ ಪ್ರಯಾಣಿಕರ ವಾಹನಗಳಿಗೆ ಸೂಚನಾ ಫಲಕ ಅಳವಡಿಸಲು ಕೊಡಗು ಜಿಲ್ಲಾ ಪೊಲೀಸ್ ಅಧೀಕ್ಷಕರಿಗೆ ಸೂಚಿಸಿದೆ.

ಚೆಕ್ ಪೋಸ್ಟ್ ನಿರ್ಮಾಣ :

ಕೊಡಗು ಜಿಲ್ಲೆಯ ಮುಖಾಂತರ ಹಾದು ಹೋಗುವ ರಾಷ್ಟ್ರೀಯ ಹೆದ್ದಾರಿ 275 ರ ಜಿಲ್ಲೆಯ ಗಡಿಭಾಗಗಳಾದ ಕುಶಾಲನಗರ ಮತ್ತು ಸಂಪಾಜೆಯಲ್ಲಿ ವ್ಯವಸ್ಥಿತ ಚೆಕ್ ಪೋಸ್ಟ್ ನಿರ್ಮಿಸಿ, ದಿನದ 24 ಗಂಟೆಯೂ ನಿಗಾ ವಹಿಸಲು ಸಿಬ್ಬಂದಿಗಳನ್ನು ನಿಯೋಜಿಸಲು, ಮೊಬೈಲ್ ಪ್ಯಾಟ್ರೋಲಿಂಗ್ ನಡೆಸಲು ಹಾಗೂ ಈ ಆದೇಶ ಉಲ್ಲಂಘನೆಯಾಗದಂತೆ ಮತ್ತು ಆದೇಶ ಉಲ್ಲಂಘಿಸಿದವರ ವಿರುದ್ದ ನಿಯಮಾನುಸಾರ ಕ್ರಮ ಕೈಗೊಳ್ಳಲು ಆರಕ್ಷಕ ಹಾಗೂ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ತಿಳಿಸಿದೆ ಎಂದು ಜಿಲ್ಲಾ ದಂಡಾಧಿಕಾರಿ ಮತ್ತು ಪ್ರಾದೇಶಿಕ ಸಾರಿಗೆ ಪ್ರಾಧಿಕಾರದ ಅಧ್ಯಕ್ಷರಾದ ಎಸ್.ಜೆ.ಸೋಮಶೇಖರ್ ಅವರು ಆದೇಶದಲ್ಲಿ ತಿಳಿಸಿದ್ದಾರೆ.

# ವೃದ್ಧ ಮಹಿಳೆಯ ಒಂದು ಬೇಡಿಕೆ.. ಒಂದೇ ದಿನದಲ್ಲಿ ಈಡೇರಿಕೆ..

ಪುತ್ತೂರು: ಬಲ್ನಾಡಿನ ಮಹಿಳೆ ಭಾನುವಾರ ತನ್ನ ಸಂಕಷ್ಟ ಹೇಳಿ ಕೊಂಡಿದ್ದರು. ಸೋಮವಾರ ಅವರ ಸಂಕಷ್ಟಕ್ಕೆ ಶಾಸಕರು ಸ್ಪಂಧಿಸಿದರು. ವೃದ್ದ ಏಕಾಂಗಿ ಮಹಿಳೆಯೊಬ್ಬರ ಒಂದು ಬೇಡಿಕೆಗೆ ಮರುದಿನವೇ ಪರಿಹಾರ ನೀಡಿದ ಪುತ್ತೂರು ಶಾಸಕರ ನಿಯತ್ತಿನ ಬಗ್ಗೆ ಸಾರ್ವಜನಿಕ ಶ್ಲಾಘನೆ ವ್ಯಕ್ತವಾಗಿದೆ.

ಬಲ್ನಾಡು ಗ್ರಾಮದಲ್ಲಿ ವಿವಿಧ ಕಾಮಗಾರಿಗಳ ಶಿಲಾನ್ಯಾಸಕ್ಕೆ ಹೋಗಿದ್ದ ಶಾಸಕ ಅಶೋಕ್ ರೈ ಅವರಿಗೆ ಮಹಿಳೆಯ ತಂಡವೊಂದು ಬಂದು ನಮ್ಮ ಮನೆಗಳನ್ನು ಒಮ್ಮೆ ನೋಡಿ ಚರಂಡಿ ಇಲ್ಲದೆ ಮನೆಯೊಳಗೆ ನೀರು ಬರುತ್ತಿದೆ. ಇದಕ್ಕೆ ಪರಿಹಾರದ ವ್ಯವಸ್ಥೆ ಮಾಡಿ ಎಂದು ಕೇಳಿಕೊಂಡರು. ಈ ಮನೆಗಳ ಪರಿಸ್ಥಿತಿ ತಿಳಿಯಲು ಹೋಗುತ್ತಿದ್ದ ಶಾಸಕರಿಗೆ ಸಣ್ಣ ಮನೆಯೊಂದರ ಮುಂದೆ ನಿಂತ ವೃದ್ಧ ಮಹಿಳೆ ಗಮನ ಸೆಳೆದರು. ತಕ್ಷಣ ಆ ಮನೆಗೇ ಹೋದ ಶಾಸಕರು ಅವರ ಸಮಸ್ಯೆ ಕೇಳಿದರು. ಮಗ ಇದ್ದಾನೆ ಆದರೆ ಮನೆಗೆ ಬರುವುದಿಲ್ಲ. ನಾನು ಏಕಾಂಗಿಯಾಗಿ ಬದುಕುತ್ತಿದ್ದೇನೆ. ಗ್ಯಾರಂಟಿ ಯೋಜನೆಯಡಿಯಲ್ಲಿ ಬರುವ ಸರ್ಕಾರದಿಂದ ಬರುವ ಎರಡು ಸಾವಿರ ರೂಪಾಯಿ ನನಗೆ ಜೀವನಾಧಾರ ಎಂದು ವೃದ್ಧ ಮಹಿಳೆ ಬಲ್ನಾಡಿನ ಗಿರಿಜಾ ತಿಳಿಸಿದರು.

ಆ ಸಂದರ್ಭ ನಿಮಗೆ ಏನು ಬೇಕು ಎಂದು ಶಾಸಕರು ಪ್ರಶ್ನಿಸಿದಾಗ ನನಗೆ ಅಡುಗೆ ಮಾಡಲು ಗ್ಯಾಸ್ ಇಲ್ಲ. ಗ್ಯಾಸ್ ಒಲೆ ಇಲ್ಲ ಎಂದರು. ಅದನ್ನು ನೀಡುವುದಾಗಿ ಶಾಸಕರಿಂದ ಭರವಸೆ ಪಡೆದ ಬಲ್ನಾಡಿನ ಗಿರಿಜಾ ಮರುದಿನವೇ ಗ್ಯಾಸ್ ಮತ್ತು ಗ್ಯಾಸ್ ಒಲೆಯ ಮಾಲಕರಾಗಿದ್ದಾರೆ. ಕೊಟ್ಟ ಮಾತಿನಂತೆ ಒಂದೇ ದಿನದಲ್ಲಿ ಗ್ಯಾಸ್ ಮತ್ತು ಗ್ಯಾಸ್ ಒಲೆ ತಲುಪಿಸಿದ ಶಾಸಕರು ಆ ಮನೆಗೇ ಹೋಗಿ ಗ್ಯಾಸ್ ಒಲೆಯನ್ನು ತಾವೇ ಉರಿಸಿ ಮಹಿಳೆಗೆ ಶುಭ ಹಾರೈಸಿದರು. ಈ ಸಂದರ್ಭ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಪ್ರಸಾದ್ ಆಳ್ವ, ಪುಡಾ ಸದಸ್ಯ ನಿಹಾಲ್ ಪಿ ಶೆಟ್ಟಿ, ಮುಖಂಡರಾದ ಶರೀಫ್ ಬಲ್ನಾಡು, ರಾಮಣ್ಣ ಪಿಲಿಂಜ, ದಾಮೋದರ ಮುರ ಸೇರಿದಂತೆ ಹಲವು ಮಂದಿ ಇದ್ದರು.

ಸಮಾಜದಲ್ಲಿ ಇಂತವರಿರಬೇಕು..

ಶಾಸಕರು ನನ್ನ ಮನೆಗೆ ಬಂದ್ರು, ಅವರು ಶಾಸಕ ಅಶೋಕ್ ರೈ ಎಂದು ನನಗೆ ಗೊತ್ತಿರಲಿಲ್ಲ. ಮನೆಯೊಳಗೆ ಬಂದವರು ಎಲ್ಲವನ್ನೂ ಕೇಳಿ ತಿಳಿದುಕೊಂಡರು ನಾನು ನನ್ನ ನೋವನ್ನು ಹೇಳಿದೆ. ಏನು ಬೇಕೂಂತ ಕೇಳಿದ್ರು ಗ್ಯಾಸ್ ಬೇಕೆಂದು ಹೇಳಿದೆ. ಕೊಡುವುದಾಗಿ ಹೇಳಿದರು. ಇಷ್ಟು ಬೇಗ ಸಿಗ್ತದೆ ಎಂದು ನಾನು ನಂಬಿರಲಿಲ್ಲ. ಕೊಟ್ಟ ಮಾತಿನಂತೆ ನಡೆದುಕೊಂಡಿದ್ದಾರೆ. ಇವರಂಥವರು ಸಮಾಜದಲ್ಲಿ ಇರಬೇಕು. ಬಡವರಿಗೆ ನೆರವಾಗುವ ಮನಸ್ಸು ಎಲ್ಲರಿಗೂ ಇರುವುದಿಲ್ಲ, ಅವರು ಅನೇಕ ವರ್ಷಗಳ ಕಾಲ ಶಾಸಕರಾಗಿಯೇ ಇರಲಿ ಎಂದು ನಾನು ಆಶೀರ್ವಾದ ಮಾಡುವೆ–

–ಗಿರಿಜಾ ಬಲ್ನಾಡು ಫಲಾನುಭವಿ

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE